# ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯ

ನವನಗರ, ಹುಬ್ಬಳ್ಳಿ – 580025

**ನ್ಯಾಕ 'ಎ' ಶ್ರೇಣಿ ಮಾನ್ಯತೆ**

ದೂರವಾಣಿ ಸಂಖ್ಯೆ : 0836-2222392 | ಜಾಲತಾಣ : www.kslu.karnataka.gov.in

ಫ್ಯಾಕ್ಸ್ : 0836-2223392 | ಇ–ಮೇಲ್ : ksluscstcell@gmail.com


---

ಸಂಖ್ಯೆ: ಕರಾಕಾವಿ/ಪ.ಜಾ–ಪ.ಪಂ.ಘಟಕ/2021-22/01055 | ದಿನಾಂಕ:04.10.2021

## ಸುತ್ತೋಲೆ

**ವಿಷಯ:** ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ರಾಜ್ಯ ಮಟ್ಟದ ಜಾಗೃತ ಮತ್ತು ಉಸ್ತುವಾರಿ ಸಮಿತಿ ಸಭೆಯ ನಡುವಳಿಗಳಂತೆ ಕ್ರಮವಹಿಸುವ ಬಗ್ಗೆ.

**ಉಲ್ಲೇಖ:** ಸಂಖ್ಯೆ: ಲಾ–ಕೆಎಲ್ಎಮ್/53/2021 ದಿನಾಂಕ: 29.09.2021

ಮೇಲ್ಕಾಣಿಸಿದ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ (ದೌರ್ಜನ್ಯ ನಿಯಂತ್ರಣ) ನಿಯಮಗಳು 1995 ರಡಿ ರಚಿಸಲಾದ ರಾಜ್ಯ ಮಟ್ಟದ ಜಾಗೃತ ಮತ್ತು ಉಸ್ತುವಾರಿ ಸಮಿತಿ ಸಭೆಯು ದಿನಾಂಕ: 30-08-2021 ರಂದು ಸನ್ಮಾನ್ಯ ಮುಖ್ಯ ಮಂತ್ರಿಗಳ ಅಧ್ಯಕ್ಷತೆಯಲ್ಲಿ ಜರುಗಿದ್ದು, ಸದರಿ ಸಭೆಯ ನಡಾವಳಿಯಲ್ಲಿರುವ ಅಂಶಗಳ ಬಗ್ಗೆ ಕ್ರಮವಹಿಸಲು ಸೂಚಿಸಲಾಗಿರುತ್ತದೆ. ಸದರಿ ನಡಾವಳಿಗಳ ಪ್ರತಿಯನ್ನು ಈ ಪತ್ರದೊಂದಿಗೆ ಲಗತ್ತಿಸಿ ಅದರಲ್ಲಿ ಸೂಚಿಸಿರುವ ಅಂಶಗಳಂತೆ ತಮ್ಮ ಮಹಾವಿದ್ಯಾಲಯಗಳಲ್ಲಿ ಕ್ರಮಕೈಗೊಳ್ಳುವಂತೆ ಈ ಮೂಲಕ ಸೂಚಿಸಿದೆ.

ಕುಲಸಚಿವರು

**ಗೆ,**

ಪ್ರಾಂಶುಪಾಲರು

ಕರಾಕಾವಿ ಅಧೀನದಲ್ಲಿರುವ ಎಲ್ಲಾ ಸಂಯೋಜಿತ ಕಾನೂನು ಮಹಾವಿದ್ಯಾಲಯಗಳಿಗೆ

ಪ್ರತಿಯನ್ನು :

1. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿಗಳು, ಕರಾಕಾವಿ, ನವನಗರ, ಹುಬ್ಬಳ್ಳಿ.
2. ಮುಖ್ಯಸ್ಥರು, ಐಸಿಟಿ (ಜಾಲತಾಣ) ವಿಭಾಗ, ಕರಾಕಾವಿ, ನವನಗರ, ಹುಬ್ಬಳ್ಳಿರವರ ಅಗತ್ಯ ಕ್ರಮಕ್ಕಾಗಿ.
3. ಕಛೇರಿ ಪ್ರತಿ.

# ಸಮಾಜ ಕಲ್ಯಾಣ ಇಲಾಖೆ

ಸನ್ಮಾನ್ಯ ಮುಖ್ಯಮಂತ್ರಿಯವರ ಅಧ್ಯಕ್ಷತೆಯಲ್ಲಿ ದಿನಾಂಕ:30-08-2021 ರಂದು ದೌರ್ಜನ್ಯ ಪ್ರತಿಬಂಧ ಅಧಿನಿಯಮ-1989 (ತಿದ್ದುಪಡಿ ಕಾಯ್ದೆ 2015) ಮತ್ತು ನಿಯಮಗಳು-1995 (ತಿದ್ದುಪಡಿ ನಿಯಮಗಳು-2016) ರಡಿ ನಡೆದ ರಾಜ್ಯ ಮಟ್ಟದ ಜಾಗೃತ ಮತ್ತು ಉಸ್ತುವಾರಿ ಸಮಿತಿ ಸಭೆಯ ನಡವಳಿಗಳು.

<u>ಸಭೆಯಲ್ಲಿ ಹಾಜರಿದ್ದ ಸದಸ್ಯರು:</u>

1. ಮಾನ್ಯ ಶ್ರೀ ಬಸವರಾಜ ಬೊಮ್ಮಾಯಿ, ಸನ್ಮಾನ್ಯ ಮುಖ್ಯಮಂತ್ರಿಗಳು
2. ಮಾನ್ಯ ಶ್ರೀ ಜೆ.ಸಿ.ಮಾಧುಸ್ವಾಮಿ, ಮಾನ್ಯ ಸಣ್ಣ ನೀರಾವರಿ, ಕಾನೂನು ಸಂಸದೀಯ ವ್ಯವಹಾರ ಮತ್ತು ಶಾಸನ ರಚನೆ ಸಚಿವರು
3. ಮಾನ್ಯ ಶ್ರೀ ಕೋಟ ಶ್ರೀನಿವಾಸ ಪೂಜಾರಿ, ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು
4. ಮಾನ್ಯ ಶ್ರೀ ಬಿ.ಶ್ರೀರಾಮುಲು, ಮಾನ್ಯ ಸಾರಿಗೆ ಮತ್ತು ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರು.
5. ಡಾ. ಉಮೇಶ್ ಜಿ. ಜಾಧವ್, ಮಾನ್ಯ ಲೋಕಸಭಾ ಸದಸ್ಯರು, ಕಲಬುರಗಿ.
6. ಶ್ರೀ ರಾಜ ಅಮರೇಶ್ ನಾಯಕ, ಮಾನ್ಯ ಲೋಕಸಭಾ ಸದಸ್ಯರು, ರಾಯಚೂರು ಜಿಲ್ಲೆ.
7. ಶ್ರೀ ಎನ್. ಮಹೇಶ್, ಮಾನ್ಯ ವಿಧಾನ ಸಭೆ ಸದಸ್ಯರು, ಕೊಳ್ಳೇಗಾಲ ಕ್ಷೇತ್ರ, ಚಾಮರಾಜನಗರ ಜಿಲ್ಲೆ.
8. ಶ್ರೀ ಎಂ. ಚಂದ್ರಪ್ಪ, ಮಾನ್ಯ ವಿಧಾನ ಸಭೆ ಸದಸ್ಯರು, ಹೊಳಲ್ಕೆರೆ ಕ್ಷೇತ್ರ, ಚಿತ್ರದುರ್ಗ ಜಿಲ್ಲೆ.
9. ಶ್ರೀ ಎಂ.ಪಿ. ಕುಮಾರಸ್ವಾಮಿ, ಮಾನ್ಯ ವಿಧಾನಸಭಾ ಸದಸ್ಯರು, ಮೂಡಿಗೆರೆ ಕ್ಷೇತ್ರ, ಚಿಕ್ಕಮಗಳೂರು ಜಿಲ್ಲೆ.
10. ಶ್ರೀ ಐಹೊಳೆ ದುರ್ಯೋಧನ ಮಹಾಲಿಂಗಪ್ಪ, ಮಾನ್ಯ ವಿಧಾನ ಸಭೆ ಸದಸ್ಯರು, ರಾಯಭಾಗ ಕ್ಷೇತ್ರ, ಬೆಳಗಾವಿ ಜಿಲ್ಲೆ.
11. ಶ್ರೀ ಪಿ. ರಾಜೀವ್, ಮಾನ್ಯ ವಿಧಾನ ಸಭೆ ಸದಸ್ಯರು,ಕುಡಚಿ ಕ್ಷೇತ್ರ, ಬೆಳಗಾವಿ ಜಿಲ್ಲೆ.
12. ಶ್ರೀಮತಿ ರೂಪ ಶಶಿಧರ್, ಮಾನ್ಯ ವಿಧಾನ ಸಭೆ ಸದಸ್ಯರು, ಕೆ.ಜಿ.ಎಫ್. ಕ್ಷೇತ್ರ, ಕೋಲಾರ ಜಿಲ್ಲೆ.
13. ಶ್ರೀ ಶಿವನಗೌಡ ನಾಯಕ, ಮಾನ್ಯ ವಿಧಾನ ಸಭೆ ಸದಸ್ಯರು, ದೇವದುರ್ಗ ಕ್ಷೇತ್ರ, ರಾಯಚೂರು ಜಿಲ್ಲೆ.
14. ಸರ್ಕಾರದ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ, ವಿಧಾನ ಸೌಧ, ಬೆಂಗಳೂರು.
15. ಪ್ರಧಾನ ಕಾರ್ಯದರ್ಶಿ, ಮುಖ್ಯಮಂತ್ರಿಯವರ ಸಚಿವಾಲಯ, ವಿಧಾನಸೌಧ, ಬೆಂಗಳೂರು.
16. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಒಳಾಡಳಿತ ಇಲಾಖೆ, ವಿಧಾನಸೌಧ, ಬೆಂಗಳೂರು.
17. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ.(ಸಂಚಾಲಕರು)
18. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ, ವಿಕಾಸ ಸೌಧ, ಬೆಂಗಳೂರು.
19. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
20. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ವಿಧಾನಸೌಧ, ಬೆಂಗಳೂರು.
21. ಡೈರೆಕ್ಟರ್ ಜನರಲ್ ಅಂಡ್ ಇನ್ಸ್‌ಪೆಕ್ಟರ್ ಜನರಲ್ ಆಫ್ ಪೋಲೀಸ್, ನೃಪತುಂಗ ರಸ್ತೆ, ಬೆಂಗಳೂರು
22. ಡೈರೆಕ್ಟರ್ ಜನರಲ್ ಆಫ್ ಪೋಲೀಸ್, ನಾಗರಿಕ ಹಕ್ಕು ಜಾರಿ ನಿರ್ದೇಶನಾಲಯ, ಬೆಂಗಳೂರು
23. ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ನೋಡೆಲ್ ಸಲಹೆಗಾರರು ಸಮಾಜ ಕಲ್ಯಾಣ ಇಲಾಖೆ
24. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.

25. ನಿರ್ದೇಶಕರು, ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆ
26. ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಕೃಷಿ ಭವನ, ಬೆಂಗಳೂರು.
27. ನಿರ್ದೇಶಕರು, ರಾಷ್ಟ್ರೀಯ ಪರಿಶಿಷ್ಟ ಜಾತಿಗಳ ಆಯೋಗ, (ಕರ್ನಾಟಕ), ಬೆಂಗಳೂರು (ಪರವಾಗಿ)
28. ಶ್ರೀಮತಿ ಪಿ.ಯಶೋಧಮ್ಮ, ರಾಜ್ಯ ಸಂಚಾಲಕರು, ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳ ಮೇಲ್ವಿಚಾರಣೆ ಮತ್ತು ಬಲವರ್ಧನಾ ಸಮಿತಿ

ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ ರವರು ದೌರ್ಜನ್ಯ ಪ್ರತಿಬಂಧ ಅಧಿನಿಯಮ-1989 (ತಿದ್ದುಪಡಿ ಕಾಯ್ದೆ 2015) ಮತ್ತು ನಿಯಮಗಳು-1995 (ತಿದ್ದುಪಡಿ ನಿಯಮಗಳು-2016) ರಡಿ ರಾಜ್ಯ ಮಟ್ಟದ ಜಾಗೃತ ಮತ್ತು ಉಸ್ತುವಾರಿ ಸಮಿತಿ ಸಭೆಗೆ ಸನ್ಮಾನ್ಯ ಮುಖ್ಯಮಂತ್ರಿಗಳನ್ನು ಎಲ್ಲರ ಪರವಾಗಿ ಹೃತ್ಪೂರ್ವಕವಾಗಿ ಸ್ವಾಗತಿಸಿದರು. ಮುಂದುವರೆದು, ಸಭೆಯಲ್ಲಿ ಹಾಜರಿದ್ದ ಸಮಿತಿ ಸಭೆಯ ಸದಸ್ಯಗಳಾದ ಮಾನ್ಯ ಸಚಿವರನ್ನು, ಲೋಕಸಭಾ ಸದಸ್ಯರನ್ನು ಹಾಗೂ ವಿಧಾನಸಭಾ ಸದಸ್ಯರನ್ನು ಮತ್ತು ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿ ಸಭೆಯನ್ನು ನಡೆಸಿಕೊಡಲು ಸನ್ಮಾನ್ಯ ಮುಖ್ಯಮಂತ್ರಿಯವರ ಅನುಮತಿ ಕೋರಿದರು. ಅದರಂತೆ ಸನ್ಮಾನ್ಯ ಮುಖ್ಯಮಂತ್ರಿಯವರ ಅನುಮತಿ ಮೇರೆಗೆ ಸಭೆಯನ್ನು ಪ್ರಾರಂಭಿಸಲಾಯಿತು.

ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ ರವರು ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ದೌರ್ಜನ್ಯ ಪ್ರತಿಬಂಧ ಅಧಿನಿಯಮ 1989 (ತಿದ್ದುಪಡಿ ಕಾಯ್ದೆ 2015) ಮತ್ತು ನಿಯಮಗಳು 1995 (ತಿದ್ದುಪಡಿ ನಿಯಮಗಳು 2016) ರಡಿ ರಾಜ್ಯ ಮಟ್ಟದ ಜಾಗೃತಿ ಮತ್ತು ಉಸ್ತುವಾರಿ ಸಮಿತಿ ಸಭೆಯು ವರ್ಷದಲ್ಲಿ ಎರಡು ಬಾರಿ ಅಂದರೆ ಜನವರಿ ಮತ್ತು ಜುಲೈ ತಿಂಗಳನಲ್ಲಿ ನಡೆಸಬೇಕಾಗಿದೆ ಎಂದು ತಿಳಿಸಿದರು. ಅದೇರೀತಿ ಜಿಲ್ಲಾ ಮಟ್ಟದಲ್ಲಿ ಮತ್ತು ಉಪವಿಭಾಗ ಮಟ್ಟದಲ್ಲಿ ಪ್ರತಿ 3 ತಿಂಗಳಿಗೊಮ್ಮೆ ಅನುಕ್ರಮವಾಗಿ ಜಿಲ್ಲಾಧಿಕಾರಿಗಳು ಮತ್ತು ಉಪವಿಭಾಗಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸಭೆ ನಡೆಸಬೇಕಾಗಿದೆ ಎಂದು ಸಭೆಯ ಗಮನಕ್ಕೆ ತಂದರು. ಹಿಂದಿನ ರಾಜ್ಯ ಮಟ್ಟದ ಜಾಗೃತ ಮತ್ತು ಉಸ್ತುವಾರಿ ಸಮಿತಿ ಸಭೆಯಲ್ಲಿ ಚರ್ಚಿಸಲಾದ ವಿಷಯಗಳ ಬಗ್ಗೆ ಅನುಪಾಲನಾ ವರದಿಯನ್ನು ಸಹ ಸೇರಿಸಿ ಸದರಿ ಸಭೆಗೆ ಅಗತ್ಯ ಮಾಹಿತಿಯನ್ನು ಅಜೆಂಡಾದಲ್ಲಿ ಒದಗಿಸಲಾಗಿದೆ ಎಂದು ತಿಳಿಸಿದರು. ಹಿಂದಿನ ಸಭೆಯಲ್ಲಿ ತಿಳಿಸಿರುವಂತೆ, ದೌರ್ಜನ್ಯ ಪ್ರಕರಣಗಳಲ್ಲಿ ಸಾಕ್ಷಿದಾರರ ಹೇಳಿಕೆಯನ್ನು ವೀಡಿಯೋ ಚಿತ್ರೀಕರಣ ಮಾಡಲು ನಿರ್ದೇಶನ ನೀಡಲಾಗಿದೆ ಎಂದು ಸಭೆಯ ಗಮನಕ್ಕೆ ತಂದರು.

ಶ್ರೀ ಜೆ.ಸಿ. ಮಾಧುಸ್ವಾಮಿ, ಮಾನ್ಯ ಸಣ್ಣ ನೀರಾವರಿ, ಕಾನೂನು ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವರು ಮಾತನಾಡಿ ಜಿಲ್ಲಾ ಮಟ್ಟದಲ್ಲಿ ಜಿಲ್ಲಾ ಉಸ್ತುವಾರಿ ಸಚಿವರ ಅಧ್ಯಕ್ಷತೆಯಲ್ಲಿ ಸಭೆಯನ್ನು ನಡೆಸಲು ಸೂಕ್ತ ನಿರ್ದೇಶನ ನೀಡಲು ಮಾನ್ಯ ಮುಖ್ಯಮಂತ್ರಿಗಳನ್ನು ಕೋರಿದರು. ಮಾನ್ಯ ಮುಖ್ಯಮಂತ್ರಿಗಳು ಮಾತನಾಡಿ, ಜಿಲ್ಲಾ ಉಸ್ತುವಾರಿ ಸಚಿವರ ಅಧ್ಯಕ್ಷತೆಯಲ್ಲಿಯೂ ಸಹ ಜಿಲ್ಲಾ ಮಟ್ಟದಲ್ಲಿ ಜಾಗೃತಿ ಮತ್ತು ಉಸ್ತುವಾರಿ ಸಮಿತಿ ಸಭೆಗಳನ್ನು ನಡೆಸಲು ಸೂಕ್ತ ನಿರ್ದೇಶನ ನೀಡಲಾಗುವುದೆಂದು ತಿಳಿಸಿದರು.

**(ಕ್ರಮ: ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ)**

ಶ್ರೀ ಎಂ.ಚಂದ್ರಪ್ಪ, ಮಾನ್ಯ ವಿಧಾನಸಭಾ ಸದಸ್ಯರು, ಹೊಳಲ್ಕೆರೆ ಕ್ಷೇತ್ರ ಇವರು ಮಾತನಾಡಿ, ದೌರ್ಜನ್ಯ ತಡೆಗಟ್ಟುವ ಕಾಯ್ದೆ ಕಲಂ-4ರಲ್ಲಿ ಎಷ್ಟು ಅಧಿಕಾರಿಗಳ ವಿರುದ್ಧ ಕ್ರಮವಹಿಸಲಾಗಿದೆ ಎಂದು ಮಾಹಿತಿ ನೀಡಲು ಕೋರಿದರು.

ಮಾನ್ಯ ಮುಖ್ಯಮಂತ್ರಿಗಳು ಮಾತನಾಡಿ, ಕೆಳ ಹಂತದ ಅಧಿಕಾರಿಗಳ ನಿರ್ಲಕ್ಷತೆ ಬಗ್ಗೆ ಉನ್ನತ ಮಟ್ಟದ ಅಧಿಕಾರಿಗಳು ಕ್ರಮ ತೆಗೆದುಕೊಳ್ಳಲು ಸದರಿ ಕಾಯ್ದೆಯಲ್ಲಿ ಅವಕಾಶವಿದ್ದರೂ, ಕ್ರಮ ತೆಗೆದುಕೊಳ್ಳದೇ ಇರುವ ಬಗ್ಗೆ ಪ್ರಸ್ತಾಪಿಸಿ ದೌರ್ಜನ್ಯ ಪ್ರಕರಣಗಳ ಕುರಿತು ಸಮೀಕ್ಷೆ ಮಾಡಿ ಸಮಿತಿಯಲ್ಲಿ ಲೋಪದೋಷಗಳು ಕಂಡು ಬಂದಲ್ಲಿ ಅಂತಹ ಅಧಿಕಾರಿಗಳ ವಿರುದ್ಧ ನಿಯಮಾನುಸಾರ ಕ್ರಮ ಜರುಗಿಸುವಂತೆ ಸೂಚಿಸಿದರು.

(ಕ್ರಮ: **ಡೈರೆಕ್ಟರ್ ಜನರಲ್ ಅಂಡ್ ಇನ್ಸ್‌ಪೆಕ್ಟರ್ ಜನರಲ್ ಆಫ್ ಪೋಲೀಸ್ ಮತ್ತು ಡೈರೆಕ್ಟರ್ ಜನರಲ್ ಆಫ್ ಪೋಲೀಸ್, ನಾಗರಿಕ ಹಕ್ಕು ಜಾರಿ ನಿರ್ದೇಶನಾಲಯ**)

1. **ದೌರ್ಜನ್ಯ ಪ್ರಕರಣಗಳಲ್ಲಿ ಪ್ರಥಮ ವರ್ತಮಾನ ವರದಿಯನ್ನು ನಮೂದಿಸುವ, ನಿಗದಿತ ಸಮಯದೊಳಗೆ ತನಿಖೆ ನಡೆಸಿ ಆರೋಪ ಪಟ್ಟಿಯನ್ನು ನ್ಯಾಯಾಲಯಕ್ಕೆ ಸಲ್ಲಿಸುವ ಬಗ್ಗೆ:--**

ದೌರ್ಜನ್ಯ ಪ್ರಕರಣಗಳಲ್ಲಿ ಎಫ್.ಐ.ಆರ್. ದಾಖಲಾತಿ ಮತ್ತು ದೋಷಾರೋಪಣೆ ಪಟ್ಟಿ ಸಲ್ಲಿಸುವ ಇತ್ಯಾದಿಗಳ ಬಗ್ಗೆ ಚರ್ಚಿಸಲಾಯಿತು. ಡೈರೆಕ್ಟರ್ ಜನರಲ್ ಆಫ್ ಪೋಲೀಸ್, ನಾಗರಿಕ ಹಕ್ಕು ಜಾರಿ ನಿರ್ದೇಶನಾಲಯ, ರವರು ಮಾತನಾಡಿ, 2019 ಮತ್ತು 2020ರಲ್ಲಿ ಶೇ.78% ರಿಂದ 80% ರಷ್ಟು ಪ್ರಕರಣಗಳಲ್ಲಿ ದೋಷಾರೋಪಣ ಪಟ್ಟಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಲಾಗಿದೆ. ಕೆಲವು ಪ್ರಕರಣಗಳಲ್ಲಿ ನ್ಯಾಯಾಲಯದ ತಡೆಯಾಜ್ಞೆ ಇತ್ಯಾದಿ ಇರುವುದರಿಂದ, ದೋಷಾರೋಪಣ ಪಟ್ಟಿ ಸಲ್ಲಿಸಲು ವಿಳಂಬವಾಗಿರುತ್ತದೆ ಎಂದು ತಿಳಿಸಿದರು.

ಪ್ರಥಮ ವರ್ತಮಾನ ವರದಿ ದಾಖಲಾದ ಕೂಡಲೇ ಸಂಬಂಧಿಸಿದ ಡಿ.ವೈ.ಎಸ್.ಪಿ ರವರಿಗೆ 60 ದಿನಗಳಲ್ಲಿ ತನಿಖೆ ಮಾಡಿ ವರದಿ ಸಲ್ಲಿಸಲು ಲಿಖಿತ ಆದೇಶ ನೀಡಲಾಗುತ್ತದೆ. ತನಿಖಾಧಿಕಾರಿಗಳು ತಕ್ಷಣವೇ ತನಿಖೆಯನ್ನು ಕೈಗೆತ್ತಿಕೊಂಡು 60 ದಿನಗಳ ಒಳಗೆ ತನಿಖೆಯನ್ನು ಮುಕ್ತಾಯಗೊಳಿಸಲಾಗುತ್ತಿದೆ. ತನಿಖೆಯಲ್ಲಿ ಲೋಪದೋಷಗಳು ಕಂಡು ಬಂದಲ್ಲಿ ಸಂಬಂಧಪಟ್ಟ ತನಿಖಾಧಿಕಾರಿಯ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ತಿಳಿಸಿದರು.

ಶ್ರೀ. ಬಿ.ಶ್ರೀರಾಮುಲು, ಮಾನ್ಯ ಸಾರಿಗೆ ಮತ್ತು ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರು 60 ದಿನಗಳ ಒಳಗಾಗಿ ತನಿಖೆ ಪೂರ್ಣಗೊಳಿಸಿ ಚಾರ್ಜ್‌ಶೀಟ್ ಹಾಕುವಲ್ಲಿ ವಿಳಂಬ ಆಗಿರುವಂತಹ ಪ್ರಕರಣಗಳ ಕುರಿತು ಕ್ರಮವಹಿಸಲು ಮತ್ತು ಶಿಕ್ಷೆಯ ಪ್ರಮಾಣವನ್ನು ಹೆಚ್ಚಿಸಲು ಅಗತ್ಯ ಕ್ರಮ ಜರುಗಿಸಲು ಪೋಲೀಸ್ ಅಧಿಕಾರಿಗಳಿಗೆ ತಿಳಿಸಿದರು.

(ಕ್ರಮ: **ಡೈರೆಕ್ಟರ್ ಜನರಲ್ ಅಂಡ್ ಇನ್ಸ್‌ಪೆಕ್ಟರ್ ಜನರಲ್ ಆಫ್ ಪೋಲೀಸ್ ಮತ್ತು ಡೈರೆಕ್ಟರ್ ಜನರಲ್ ಆಫ್ ಪೋಲೀಸ್, ನಾಗರಿಕ ಹಕ್ಕು ಜಾರಿ ನಿರ್ದೇಶನಾಲಯ**)

ಪೊಲೀಸ್ ಮಹಾನಿರ್ದೇಶಕರು, ದೌರ್ಜನ್ಯ ಪ್ರಕರಣಗಳಲ್ಲಿ ಶಿಕ್ಷೆಯ ಪ್ರಮಾಣದ ಬಗ್ಗೆ ಉತ್ತರಿಸುತ್ತಾ, ಇಲಾಖೆಯಲ್ಲಿ ಪ್ರತಿ 3 ತಿಂಗಳಿಗೊಮ್ಮೆ **Acquital Review Committee**ದಲ್ಲಿ ಪ್ರಕರಣವಾರು ಪರಿಶೀಲಿಸಿ ಸೂಕ್ತ ಕ್ರಮ ಜರುಗಿಸಲಾಗುತ್ತಿರುವುದಾಗಿ ಸಭೆಗೆ ತಿಳಿಸಿದರು.

ಮಾನ್ಯ ಮುಖ್ಯಮಂತ್ರಿಗಳು ಹಿಂದಿನ ವರ್ಷಗಳಲ್ಲಿ ಎಫ್.ಐ.ಆರ್.ದಾಖಲಾದ ಪ್ರಕರಣಗಳಲ್ಲಿ ಎಷ್ಟು ಪ್ರಕರಣಗಳಲ್ಲಿ ತನಿಖೆ ಪೂರ್ಣಗೊಳಿಸಿರುವುದಿಲ್ಲವೆಂದು ಕೇಳಿದರು. ಆ ಬಗ್ಗೆ ಹೆಚ್ಚುವರಿ ಪೊಲೀಸ್ ಮಹಾನಿರ್ದೇಶಕರು, ನ್ಯಾಯಾಲಯದ ತಡೆಯಾಜ್ಞೆ ಆದೇಶಗಳು ಇರುವುದರಿಂದ, ತನಿಖೆಯನ್ನು ೬೦ ದಿನಗಳ ಒಳಗೆ ಪೂರ್ಣಗೊಳಿಸಲು ಸಾಧ್ಯವಾಗಿರುವುದಿಲ್ಲವೆಂದು ತಿಳಿಸುತ್ತಾ, ವಿವರಗಳನ್ನು ಈ ಕೆಳಗಿನಂತೆ ನೀಡಿರುತ್ತಾರೆ.

2016ನೇ ಸಾಲಿಗೆ ಸಂಬಂಧಿಸಿದಂತೆ 6 ಪ್ರಕರಣಗಳು,
2017ನೇ ಸಾಲಿಗೆ 17 ಪ್ರಕರಣಗಳು,
2018ನೇ ಸಾಲಿಗೆ 36ಪ್ರಕರಣಗಳು
2019ನೇ ಸಾಲಿಗೆ 42 ಪ್ರಕರಣಗಳು
2020ನೇ ಸಾಲಿಗೆ 93 ಪ್ರಕರಣಗಳು

ಮಾನ್ಯ ಮುಖ್ಯಮಂತ್ರಿಗಳು, ಗೃಹ ಮತ್ತು ಕಾನೂನು ಇಲಾಖೆಯೊಂದಿಗೆ ಸಮನ್ವಯ ಸಭೆಗಳನ್ನು ನಡೆಸಿ ಬಾಕಿ ಪ್ರಕರಣಗಳನ್ನು ಇತ್ಯರ್ಥಗೊಳಿಸುವ ಬಗ್ಗೆ ಹಾಗೂ ತನಿಖೆಯಲ್ಲಿ ಲೋಪವಾಗುತ್ತಿರುವ ಕುರಿತು ವಿಶ್ಲೇಷಣೆ ಮಾಡಿ ಸಂಬಂಧಪಟ್ಟ ಪೊಲೀಸ್ ಮಹಾನಿರ್ದೇಶಕರು ಹಾಗೂ ಪ್ರಾಸಿಕ್ಯೂಷನ್ ಮುಖ್ಯಸ್ಥರಿಗೆ ತಿಳಿಸಿ ಒಂದು ನಿರ್ಧಿಷ್ಟ ಅವಧಿಯಲ್ಲಿ ದೌರ್ಜನ್ಯ ಪ್ರಕರಣಗಳನ್ನು ಇತ್ಯರ್ಥ ಪಡಿಸುವಲ್ಲಿ ಕ್ರಮವಹಿಸುವಂತೆ ಸಮಾಜ ಕಲ್ಯಾಣ ಇಲಾಖೆ ಅಪರ ಮುಖ್ಯ ಕಾರ್ಯದರ್ಶಿಯವರಿಗೆ ಸೂಚಿಸಿದರು ಹಾಗೂ ಒಂದು ವಾರದೊಳಗಾಗಿ ದೌರ್ಜನ್ಯ ಪ್ರಕರಣಗಳ ಕುರಿತು ಸಮಗ್ರವಾಗಿ ಸಮೀಕ್ಷೆ ಮಾಡಿ ಪರಿಣಾಮಕಾರಿ ಕ್ರಮಗಳನ್ನು ತೆಗೆದುಕೊಳ್ಳಲು ಪೊಲೀಸ್ ಮಹಾನಿರ್ದೇಶಕರಿಗೆ ನಿರ್ದೇಶನ ನೀಡಿದರು.

(ಕ್ರಮ: **ಡೈರೆಕ್ಟರ್ ಜನರಲ್ ಅಂಡ್ ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್ ಮತ್ತು ಡೈರೆಕ್ಟರ್ ಜನರಲ್ ಆಫ್ ಪೊಲೀಸ್, ನಾಗರಿಕ ಹಕ್ಕು ಜಾರಿ ನಿರ್ದೇಶನಾಲಯ)**

ಶ್ರೀ ಜೆ.ಸಿ. ಮಾಧುಸ್ವಾಮಿ, ಮಾನ್ಯ ಸಣ್ಣ ನೀರಾವರಿ, ಕಾನೂನು ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವರು ರವರು ಮಾತನಾಡಿ ನ್ಯಾಯಾಲಯದ ಆದೇಶಗಳಲ್ಲಿ ಲೋಪದೋಷಗಳನ್ನು ತಿಳಿಸಿದಾಗ ಮಾತ್ರ ಅಧಿಕಾರಿಗಳ ವಿರುದ್ಧ ಕ್ರಮ ತೆಗೆದುಕೊಳ್ಳದೆ, ಸ್ವಯಂ ಪ್ರೇರಿತರಾಗಿ ತನಿಖೆಯಲ್ಲಿ ಮತ್ತು ದೋಷಾರೋಪಣೆ ಪಟ್ಟಿಯನ್ನು ನ್ಯಾಯಾಲಯಕ್ಕೆ ಸಲ್ಲಿಸುವ ಮುಂಚೆ ಲೋಪದೋಷಗಳನ್ನು ಗಮನಿಸಿ ಕ್ರಮ ತೆಗೆದುಕೊಳ್ಳಲು ಪೊಲೀಸ್ ಇಲಾಖೆಗೆ ಸೂಚಿಸಿದರು. ಮುಂದುವರೆದು, ನ್ಯಾಯಾಲಯದಲ್ಲಿ ವಾದ ಮಂಡಿಸುವಲ್ಲಿ ವಿಫಲವಾದ ಕಾರಣಕ್ಕಾಗಿ ಪ್ರಕರಣಗಳಲ್ಲಿ ಶಿಕ್ಷೆಯಾಗದಿದ್ದ ಪರಿಸ್ಥಿತಿಯಲ್ಲಿ ಸರ್ಕಾರದ ಗಮನಕ್ಕೆ ತಂದು ಸಂಬಂಧಿಸಿದ ಸರ್ಕಾರಿ ಅಭಿಯೋಜಕರನ್ನು ಬದಲಿಸಲು ಹಾಗೂ ಸಮರ್ಥನೀಯ ಅಭಿಯೋಜಕರನ್ನು / ವಿಶೇಷ ಅಭಿಯೋಜಕರನ್ನು ನೇಮಿಸಲು ಕ್ರಮಕೈಗೊಳ್ಳಲು ಸೂಚಿಸಿದರು.

(ಕ್ರಮ: **ಡೈರೆಕ್ಟರ್ ಜನರಲ್ ಅಂಡ್ ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್, ಡೈರೆಕ್ಟರ್ ಜನರಲ್ ಆಫ್ ಪೊಲೀಸ್, ನಾಗರಿಕ ಹಕ್ಕು ಜಾರಿ ನಿರ್ದೇಶನಾಲಯ ಮತ್ತು ನಿರ್ದೇಶಕರು, ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆ)**

ಶ್ರೀ ಶಿವನಗೌಡ ನಾಯಕ, ಮಾನ್ಯ ವಿಧಾನಸಭಾ ಸದಸ್ಯರು, ದೇವದುರ್ಗ, ರಾಯಚೂರು ಜಿಲ್ಲೆ ರವರು ರಾಯಚೂರು ಜಿಲ್ಲೆ, ದೇವದುರ್ಗ ತಾಲ್ಲೂಕು, ಜಾಗಟಗಲ್ಲು ಗ್ರಾಮದಲ್ಲಿ ದಲಿತರ ಮೇಲೆ ದೌರ್ಜನ್ಯ ಎಸಗಿರುವ ಕುರಿತು ಪ್ರಕರಣ ದಾಖಲಾಗಿದ್ದರೂ ಸಹ ಆರೋಪಿಯ ವಿರುದ್ಧ ಪೋಲೀಸ್ ಇಲಾಖೆ ಅಧಿಕಾರಿಗಳು ಕ್ರಮ ತೆಗೆದುಕೊಳ್ಳದಿರುವುದರ ಬಗ್ಗೆ ಸಭೆಯಲ್ಲಿ ಪ್ರಸ್ತಾಪಿಸಿದರು. ಈ ಕುರಿತಂತೆ ಮಾನ್ಯ ಮುಖ್ಯಮಂತ್ರಿಗಳು ಸದರಿ ಪ್ರಕರಣದ ಕುರಿತು ತುರ್ತಾಗಿ ಅಗತ್ಯ ಕ್ರಮ ಕೈಗೊಳ್ಳುವಂತೆ ಡೈರೆಕ್ಟರ್ ಜನರಲ್ ಆಫ್ ಪೋಲೀಸ್ ರವರಿಗೆ ಸೂಚಿಸಿದರು.

(ಕ್ರಮ: ಡೈರೆಕ್ಟರ್ ಜನರಲ್ ಅಂಡ್ ಇನ್ಸ್‌ಪೆಕ್ಟರ್ ಜನರಲ್ ಆಫ್ ಪೋಲೀಸ್,)

## 2. ನ್ಯಾಯಾಲಯಗಳಲ್ಲಿ ಇತ್ಯರ್ಥಕ್ಕಾಗಿ ಬಾಕಿ ಇರುವ ಪ್ರಕರಣಗಳ ಬಗ್ಗೆ

ನ್ಯಾಯಾಲಯಗಳಲ್ಲಿ ಇತ್ಯರ್ಥಕ್ಕಾಗಿ ಬಾಕಿ ಇರುವ ಪ್ರಕರಣಗಳ ಬಗ್ಗೆ ಚರ್ಚಿಸಲಾಯಿತು. ನ್ಯಾಯಾಲಯಗಳಲ್ಲಿ ಜೂನ್ 2021ರ ಅಂತ್ಯದವರೆಗೆ 6351 ಪ್ರಕರಣಗಳು ಬಾಕಿ ಇವೆ ಎಂದು ತಿಳಿಸಿದಾಗ, ಮಾನ್ಯ ಮುಖ್ಯಮಂತ್ರಿಗಳು ಬಾಕಿ ಇರುವ ಪ್ರಕರಣಗಳು ಯಾವ ವರ್ಷಗಳಿಂದ ಬಾಕಿ ಇವೆ. ವರ್ಷಾವಾರು ವಿವರಗಳನ್ನು ನೀಡುವಂತೆ ನಿರ್ದೇಶಕರು, ಸರ್ಕಾರಿ ಅಭಿಯೋಜನೆ ಇಲಾಖೆ ಇವರಿಗೆ ತಿಳಿಸಿದರು. ನಿರ್ದೇಶಕರು, ಸದರಿ ಮಾಹಿತಿಯನ್ನು ತಕ್ಷಣವೇ ಒದಗಿಸಲಾಗುವುದೆಂದು ತಿಳಿಸುತ್ತಾ, ಬಾಕಿ ಇರುವ ಪ್ರಕರಣಗಳ ಬಗ್ಗೆ ಜಿಲ್ಲಾವಾರು ಪರಿಶೀಲಿಸಿ ಸೂಕ್ತ ಕ್ರಮ ತೆಗೆದುಕೊಳ್ಳಲಾಗುವುದೆಂದು ವಿನಂತಿಸಿದರು.

(ಕ್ರಮ: ನಿರ್ದೇಶಕರು, ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆ)

ಶ್ರೀ ಎನ್.ಮಹೇಶ್, ಮಾನ್ಯ ವಿಧಾನ ಸಭೆ ಸದಸ್ಯರು, ಕೊಳ್ಳೇಗಾಲ, ಚಾಮರಾಜನಗರ ಜಿಲ್ಲೆ ರವರು ಮಾತನಾಡಿ, ದೌರ್ಜನ್ಯ ಪ್ರಕರಣಗಳ ಕುರಿತು ನಿವೃತ್ತ ನ್ಯಾಯಾಮೂರ್ತಿ ಡಾ: ನಾಗಮೋಹನ್ ದಾಸ್ ರವರ ಇತ್ತೀಚಿನ ವರದಿಯಲ್ಲಿಯೂ ಸಹ ಉಲ್ಲೇಖಿಸಿರುತ್ತಾರೆ. ಆ ಬಗ್ಗೆ ಸರ್ಕಾರ ಗಮನ ಹರಿಸಲು ತಿಳಿಸಿದರು.

ಶ್ರೀ ರಾಜ ಅಮರೇಶ್ ನಾಯಕ, ಮಾನ್ಯ ಲೋಕಸಭಾ ಸದಸ್ಯರು, ರಾಯಚೂರು ಜಿಲ್ಲೆ ರವರು ಮಾತನಾಡಿ, ಜಿಲ್ಲಾ ಮಟ್ಟದ ಹಾಗೂ ಉಪ ವಿಭಾಗದ ಮಟ್ಟದಲ್ಲಿ ಸಭೆಯನ್ನು ರಾಯಚೂರು ಜಿಲ್ಲೆ ಹಾಗೂ ಲಿಂಗಸುಗೂರು ಉಪವಿಭಾಗದಲ್ಲಿ ಸಭೆ ನಡೆಸಿರುವುದಿಲ್ಲವೆಂದು ಸಭೆಯ ಗಮನಕ್ಕೆ ತರಲಾಗಿ, ಈ ಕುರಿತಂತೆ ಮಾನ್ಯ ಮುಖ್ಯ ಮಂತ್ರಿಗಳು, ಸಭೆಯನ್ನು ನಡೆಸದೇ ಇರುವ ಸಂಬಂಧಪಟ್ಟ ಅಧಿಕಾರಿಗಳಿಗೆ ನೋಟಿಸ್ ನೀಡಿ, ಸಭೆಗಳನ್ನು ನಿಗಧಿತ ಸಮಯದಲ್ಲಿ ನಡೆಸಲು ಕ್ರಮ ವಹಿಸುವಂತೆ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ ಇವರಿಗೆ ಸೂಚಿಸಿದರು.

(ಕ್ರಮ: ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ)

## 3. ದೌರ್ಜನ್ಯ ಪ್ರಕರಣಗಳಲ್ಲಿ ಪರಿಹಾರ ಧನ ನೀಡುವ ಕುರಿತು:

ದೌರ್ಜನ್ಯ ಪ್ರಕರಣಗಳಲ್ಲಿ ಪರಿಹಾರ ಧನ ನೀಡುವ ಬಗ್ಗೆ ಸಹ ಸಭೆಯಲ್ಲಿ ಪರಿಶೀಲಿಸಲಾಯಿತು. ನೊಂದ ಸಂತ್ರಸ್ತರಿಗೆ ನಿಯಮಾನುಸಾರ ಸಕಾಲದಲ್ಲಿ ಪರಿಹಾರಧನವನ್ನು ಮಂಜೂರು ಮಾಡಿ ಪಾವತಿಸಲಾಗುತ್ತಿದೆಯೆಂದು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ

ಇವರು ಸಭೆ ಗಮನಕ್ಕೆ ತಂದರು ಹಾಗೂ ಪರಿಹಾರ ಧನ ಸಲುವಾಗಿ ಅಗತ್ಯ ಅನುದಾನವನ್ನು ಜಿಲ್ಲಾಧಿಕಾರಿಗಳಿಗೆ ನೀಡಲಾಗುತ್ತಿದೆ ಎಂದು ತಿಳಿಸಿದರು.

**4. ಸಂತ್ರಸ್ತರು ಮತ್ತು ಸಾಕ್ಷಿದಾರರಿಗೆ ಸೂಕ್ತ ರಕ್ಷಣೆ ನೀಡಿ ಅವಶ್ಯಕ ಸಾಕ್ಷ್ಯಾದಾರಗಳನ್ನು ಒದಗಿಸಿ ಶಿಕ್ಷೆಯ ಪ್ರಮಾಣವನ್ನು ಹೆಚ್ಚಿಸಲು ಕ್ರಮ ಕೈಗೊಳ್ಳುವ ಬಗ್ಗೆ.**

- ಸಂತ್ರಸ್ತರು ಮತ್ತು ಸಾಕ್ಷಿದಾರರಿಗೆ ಸೂಕ್ತ ರಕ್ಷಣೆ ನೀಡುವ ಕುರಿತು ಚರ್ಚಿಸಲಾಗಿ, ಪೊಲೀಸ್ ಮಹಾನಿರ್ದೇಶಕರು, ಸಂತ್ರಸ್ತರು ಮತ್ತು ಸಾಕ್ಷಿದಾರರಿಗೆ ಅಗತ್ಯ ರಕ್ಷಣೆಯನ್ನು ನೀಡುತ್ತಿರುವುದಾಗಿ ಸಭೆಯ ಗಮನಕ್ಕೆ ತಂದರು.
- ಈ ಕುರಿತು ಮಾನ್ಯ ಮುಖ್ಯ ಮಂತ್ರಿಗಳು ದೌರ್ಜನ್ಯ ಪ್ರಕರಣವನ್ನು ದಾಖಲಿಸಲು ಬಂದಾಗ ದೂರುದಾರರಿಗೆ ರಕ್ಷಣೆ ನೀಡುವುದರ ಜೊತೆಗೆ ಸಂತ್ರಸ್ತರು ಮತ್ತು ಸಾಕ್ಷಿದಾರರು ನ್ಯಾಯಾಲಯಕ್ಕೆ ಹೇಳಿಕೆಯನ್ನು ನೀಡಲು ತೆರಳುವಾಗ ಹಾಗೂ ಪ್ರಕರಣವು ಇತ್ಯರ್ಥಗೊಂಡ ನಂತರದಲ್ಲಿಯೂ ಸಹ ಸೂಕ್ತ ರಕ್ಷಣೆ ನೀಡಲು ಪೊಲೀಸ್ ಇಲಾಖೆ ಕ್ರಮವಹಿಸುವಂತೆ ಸೂಚಿಸಿದರು.
- ಶ್ರೀಮತಿ ರೂಪ ಶಶಿಧರ್, ಮಾನ್ಯ ವಿಧಾನ ಸಭೆ ಸದಸ್ಯರು, ಕೆ.ಜಿ.ಎಫ್. ಕ್ಷೇತ್ರ ರವರು ಮಾತನಾಡಿ, ಹೆಣ್ಣು ಮಕ್ಕಳು ದೌರ್ಜನ್ಯ ಪ್ರಕರಣಗಳನ್ನು ದಾಖಲಿಸುವಲ್ಲಿ, ಆಗುತ್ತಿರುವ ಗೊಂದಲ ಹಾಗೂ ಸಾಕ್ಷ್ಯ ಹೇಳಲು ಸೂಕ್ತ ವ್ಯವಸ್ಥೆಯನ್ನು ಮಾಡಲು ಪೊಲೀಸ್ ಇಲಾಖೆ ಕ್ರಮ ತೆಗೆದುಕೊಳ್ಳಬೇಕೆಂದು ಒತ್ತಾಯಿಸಿದರು.

(ಕ್ರಮ: **ಡೈರೆಕ್ಟರ್ ಜನರಲ್ ಅಂಡ್ ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್**)

**5. ದೌರ್ಜನ್ಯದಲ್ಲಿ ಮೃತಪಟ್ಟ ಕುಟುಂಬದ ಅವಲಂಬಿತರಿಗೆ ಅನುಕಂಪದ ಆಧಾರದ ಮೇಲೆ ಸರ್ಕಾರಿ ನೌಕರಿ ನೀಡುವ ಬಗ್ಗೆ.**

- ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಸ.ಕ.ಇ ರವರು ಮಾತಾನಾಡಿ, ದೌರ್ಜನ್ಯ ಪ್ರಕರಣಗಳಲ್ಲಿ ಮೃತಪಟ್ಟ ಕುಟುಂಬದ ಅವಲಂಬಿತರಿಗೆ ಅನುಕಂಪದ ಆಧಾರದ ಮೇಲೆ ಈಗಾಗಲೇ ಸರ್ಕಾರಿ ನೌಕರಿ ನೀಡುತ್ತಿದ್ದು, ಕೆಲವು ಕಾರಣಗಳಿಂದ ಸರ್ಕಾರಿ ನೌಕರಿ ನೀಡಲು ಸಾಧ್ಯವಾಗುತ್ತಿಲ್ಲ. ಆದ್ದರಿಂದ, ಅನುಕಂಪದ ನೇಮಕಾತಿ ನಿಯಮಗಳಿಗೆ ಅಂದರೆ ಅರ್ಜಿ ಸಲ್ಲಿಸಲು 2 ವರ್ಷಗಳ ಅವಧಿ, ಅಪ್ರಾಪ್ತ ವಯಸ್ಕರಾಗಿದ್ದಲ್ಲಿ ಅರ್ಜಿ ಸಲ್ಲಿಸಲು 3 ವರ್ಷ ನಿಗದಿಪಡಿಸಲು ಹಾಗೂ ಆದಾಯದ ಮಿತಿ ಕುರಿತು ಕರ್ನಾಟಕ ಸಿವಿಲ್ ಸೇವೆಗಳು (ಅನುಕಂಪದ ಆಧಾರದ ಮೇಲೆ ನೇಮಕಾತಿ) ನಿಯಮಗಳಂತೆ ತಿದ್ದುಪಡಿ ಮಾಡಲು ಈಗಾಗಲೇ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಗೆ ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದು ತಿಳಿಸಿದರು. ಮಾನ್ಯ ಮುಖ್ಯಮಂತ್ರಿಗಳು ಈ ಕುರಿತು ತಿದ್ದುಪಡಿಗೆ ಕ್ರಮ ವಹಿಸಲು ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ಇವರಿಗೆ ಸೂಚಿಸಿದರು.

**(ಕ್ರಮ: ಪ್ರಧಾನ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ)**

6. **ಕೊಲೆ, ಅತ್ಯಾಚಾರ, ದೊಂಬಿ ಹಾಗೂ ಗಂಭೀರ ಪ್ರಕರಣಗಳ ಬಗ್ಗೆ:**

- ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಸ.ಕ.ಇ ಇವರು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರ ವಿರುದ್ಧ ಗಂಭೀರ ದೌರ್ಜನ್ಯ ಪ್ರಕರಣಗಳ ವಿವರಗಳನ್ನು ನೀಡಿ ಪ್ರಸಕ್ತ ಸಾಲಿನಲ್ಲಿ ಕೊಲೆ ಮತ್ತು ಅತ್ಯಾಚಾರ ಪ್ರಕರಣಗಳು ಹೆಚ್ಚಾಗಿವೆ ಎಂದು ತಿಳಿಸಿದರು.
- ಪೊಲೀಸ್ ಮಹಾನಿರ್ದೇಶಕರು ಮಾತನಾಡಿ, ಕಳೆದ ವರ್ಷ ಮತ್ತು ಈ ವರ್ಷದಲ್ಲಿ ಸಾಮಾನ್ಯವಾಗಿ ಕ್ರಿಮಿನಲ್ ಪ್ರಕರಣಗಳು ಹೆಚ್ಚಾಗಿವೆ. ಅದರಂತೆ ದೌರ್ಜನ್ಯ ಪ್ರಕರಣಗಳು ಸಹ ಹೆಚ್ಚಾಗಿವೆ. ಮುಖ್ಯವಾಗಿ ಭೂ ವಿವಾದ, ಕೌಟುಂಬಿಕ ಕಲಹಗಳು, ಇತ್ಯಾದಿ ಕಾರಣಗಳಿಂದಾಗಿ ಪ್ರಕರಣಗಳು ಹೆಚ್ಚಾಗಿ ದಾಖಲಾಗುತ್ತಿವೆ ಎಂದು ತಿಳಿಸಿದರು.

**(ಕ್ರಮ: ಡೈರೆಕ್ಟರ್ ಜನರಲ್ ಅಂಡ್ ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್)**

7. **ಅರಣ್ಯ ಹಕ್ಕು ಕಾಯ್ದೆಯಡಿಯಲ್ಲಿ ಬಾಕಿಯಿರುವ ಅರ್ಜಿಗಳನ್ನು ವಿಲೇವಾರಿ ಮಾಡುವ ಬಗ್ಗೆ:**

ಶ್ರೀ ಪಿ.ರಾಜೀವ್, ಮಾನ್ಯ ವಿಧಾನ ಸಭೆ ಸದಸ್ಯರು, ಕುಡಚಿ ವಿಧಾನಸಭಾ ಕ್ಷೇತ್ರರವರು ಮಾತನಾಡಿ, ಅರಣ್ಯ ಹಕ್ಕು ಕಾಯ್ದೆಯಡಿಯಲ್ಲಿ ಹಕ್ಕು ಪತ್ರ ವಿತರಿಸುವ ಕುರಿತು ತಿರಸ್ಕೃತಗೊಂಡ ಅರ್ಜಿಗಳು ಇತ್ಯರ್ಥವಾಗದೆ ಬಾಕಿಯಿರುವ ಅರ್ಜಿಗಳನ್ನು ಶೀಘ್ರವಾಗಿ ವಿಲೇವಾರಿ ಮಾಡುವ ಬಗ್ಗೆ ಹಾಗೂ ಈ ಕುರಿತು ಜಿಲ್ಲಾ ಮಟ್ಟದ ಸಮಿತಿ ಹಾಗೂ ಉಪ ವಿಭಾಗದ ಮಟ್ಟದ ಸಮಿತಿಗೆ ಪರಿಶಿಷ್ಟ ಪಂಗಡ ಜನಾಂಗದ 3 ಜನರನ್ನು ಸದಸ್ಯರನ್ನಾಗಿ ನಾಮ ನಿರ್ದೇಶನ ಮಾಡುವ ಬಗ್ಗೆ ನಿರ್ದೇಶನ ನೀಡುವಂತೆ ಕೋರಿದರು.

ಈ ಕುರಿತು ಮಾನ್ಯ ಮುಖ್ಯಮಂತ್ರಿಗಳು ಮಾತನಾಡಿ, ತಿರಸ್ಕೃತ ಅರ್ಜಿಗಳನ್ನು ಪುನರ್ ಪರಿಶೀಲನೆ ಮಾಡುವಂತೆ ಮಾನ್ಯ ಸರ್ವೋಚ್ಛ ನ್ಯಾಯಾಲಯವು ಆದೇಶ ನೀಡಿದ್ದು, ಅದರಂತೆ ಕ್ರಮ ವಹಿಸಲಾಗುತ್ತಿದೆ ಮತ್ತು ಜಿಲ್ಲಾ ಹಾಗೂ ಉಪ ವಿಭಾಗದ ಮಟ್ಟದ ಸಮಿತಿಗೆ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಜನಾಂಗದವರನ್ನು ನಾಮ ನಿರ್ದೇಶನ ಮಾಡುವಂತೆ ತಿಳಿಸಿದರು.

ಡಾ:ಉಮೇಶ್ ಜಿ.ಜಾಧವ್, ಮಾನ್ಯ ಲೋಕಸಭಾ ಸದಸ್ಯರು, ಕಲಬುರಗಿ ಇವರು ಮಾತನಾಡಿ, ಚಿಂಚೋಳಿ ತಾಲ್ಲೂಕಿನಲ್ಲಿ ಹೆಚ್ಚಾಗಿ ಅರಣ್ಯ ಹಕ್ಕು ಪ್ರಕರಣಗಳಿದ್ದು, ಈವರೆವಿಗೂ ಸಮಿತಿಗಳನ್ನೇ ರಚಿಸಿರುವುದಿಲ್ಲವೆಂದು ಹೇಳಿದರು.

ಶ್ರೀ ಎನ್.ಮಹೇಶ್, ಮಾನ್ಯ ಶಾಸಕರು, ಕೊಳ್ಳೇಗಾಲ ಕ್ಷೇತ್ರ, ಚಾಮರಾಜನಗರ ಜಿಲ್ಲೆ ಇವರು ಬಿಳಿಗಿರಿರಂಗನಬೆಟ್ಟದಲ್ಲಿ ಕೊಳವೆಬಾವಿ ಕೊರೆಸುವ ಬಗ್ಗೆ ಮತ್ತು ಜಮೀನುಗಳ ಸಂಬಂಧ ಕಂದಾಯ ಹಾಗೂ ಅರಣ್ಯ ಇಲಾಖೆಗಳಿಂದ ಜಂಟಿ ಸರ್ವೇ ಕಾರ್ಯದ ಬಗ್ಗೆ ಪ್ರಸ್ತಾಪಿಸಿದರು. ಹುಲಿ ಸಂರಕ್ಷಣೆ ಪ್ರದೇಶಗಳಲ್ಲಿ ಕೊಳವೆಬಾವಿ ಕೊರೆಯಲು ಅವಕಾಶ ಇರುವುದಿಲ್ಲವೆಂದು ಸರ್ವೇ ಕಾರ್ಯ ಕೈಗೆತ್ತಿಕೊಳ್ಳುವ ಬಗ್ಗೆ ಕ್ರಮವಹಿಸಲಾಗುವುದೆಂದು ಅರಣ್ಯ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿಗಳು ತಿಳಿಸಿದರು.

**(ಕ್ರಮ: ಅಪರ ಮುಖ್ಯ ಕಾರ್ಯದರ್ಶಿಗಳು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ ಮತ್ತು
ಅಪರ ಮುಖ್ಯ ಕಾರ್ಯದರ್ಶಿಗಳು / ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ)**

ಶ್ರೀ ಪಿ.ರಾಜೀವ್, ಮಾನ್ಯ ವಿಧಾನ ಸಭೆ ಸದಸ್ಯರು, ಕುಡಚಿ ವಿಧಾನಸಭಾ ಕ್ಷೇತ್ರ ರವರು ಮಾತನಾಡಿ, ತಾಂಡಾಗಳಲ್ಲಿ ಪಡಿತರ ಅಂಗಡಿಗಳನ್ನು ಪ್ರಾರಂಭಿಸಲು ಸ್ಥಳೀಯ ಸಂಘ ಸಂಸ್ಥೆಗಳು ಮತ್ತು ಅರ್ಹ ವ್ಯಕ್ತಿಗಳಿಗೆ ಪರವಾನಗಿ ನೀಡಲು ಕೋರಿದರು. ಈ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರು ಮಾನ್ಯ ಸದಸ್ಯರ ಬೇಡಿಕೆಯಂತೆ ಪರಿಶೀಲಿಸಿ ಕ್ರಮ ತೆಗೆದುಕೊಳ್ಳಲು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆಹಾರ, ನಾಗರೀಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಇಲಾಖೆ ಇವರಿಗೆ ಸೂಚಿಸಿದರು.

**(ಕ್ರಮ: ಅಪರ ಮುಖ್ಯ ಕಾರ್ಯದರ್ಶಿಗಳು, ಆಹಾರ, ನಾಗರೀಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಇಲಾಖೆ ಮತ್ತು ಅಪರ ಮುಖ್ಯ ಕಾರ್ಯದರ್ಶಿಗಳು / ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ)**

ಮುಂದುವರೆದು, ಮಾನ್ಯ ಸದಸ್ಯರು ವಾಹನ ಅಪಘಾತದಲ್ಲಿ ಮೃತಪಟ್ಟ ಎಸ್.ಸಿ/ಎಸ್.ಟಿ. ಜನರಿಗೆ ವಿಮಾ ಕಂಪನಿಯಿಂದ ಪರಿಹಾರ ಧನ ನೀಡದಿದ್ದಲ್ಲಿ ಅವರುಗಳಿಗೆ ಸರ್ಕಾರದ ವತಿಯಿಂದ ಪರಿಹಾರ ನೀಡುವ ಬಗ್ಗೆ ಪ್ರಸ್ತಾಪಿಸಿದರು. ಈ ಬಗ್ಗೆ ಮಾನ್ಯ ಸಣ್ಣ ನೀರಾವರಿ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಮತ್ತು ಶಾಸನ ರಚನೆ ಸಚಿವರು ಮಾತನಾಡಿ, ವಾಹನಕ್ಕೆ ವಿಮೆ ಮಾಡಿಸಿದ್ದಲ್ಲಿ ವಿಮಾ ಕಂಪನಿ ಪರಿಹಾರವನ್ನು ಭರಿಸುತ್ತದೆ. ಇಲ್ಲದಿದ್ದಲ್ಲಿ ವಾಹನ ಮಾಲೀಕರೇ ಪರಿಹಾರ ಪಾವತಿಸಬೇಕಾಗಿರುತ್ತದೆಂದು ತಿಳಿಸಿದರು.

ನಿರ್ದೇಶಕರು, ರಾಷ್ಟ್ರೀಯ ಪರಿಶಿಷ್ಟ ಜಾತಿಗಳ ಆಯೋಗ (ಕರ್ನಾಟಕ) ಬೆಂಗಳೂರು ರವರು ಮಾತನಾಡಿ, ದೌರ್ಜನ್ಯ ಪ್ರಕರಣಗಳಲ್ಲಿ ಶಿಕ್ಷೆಯ ಪ್ರಮಾಣ ಕಡಿಮೆಯಾಗಿದ್ದು, ಶಿಕ್ಷೆಯ ಪ್ರಮಾಣ ಹೆಚ್ಚಿಸಲು ರಾಜ್ಯ ಸರ್ಕಾರ ಪರಿಣಾಮಕಾರಿ ಕ್ರಮ ಕೈಗೊಳ್ಳಲು ಹಾಗೂ ಸಂತ್ರಸ್ತರಿಗೆ ನಿಯಮಾನುಸಾರ ಸೌಲಭ್ಯಗಳನ್ನು ನೀಡುವಂತೆ ಕೋರಿದರು.

**(ಕ್ರಮ: ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ)**

## 8. ಚರ್ಚೆಗೆ ಬಂದ ಇತರೆ ವಿಷಯಗಳು:

ಶ್ರೀಮತಿ ರೂಪ ಶಶಿಧರ್, ಮಾನ್ಯ ವಿಧಾನಸಭಾ ಸದಸ್ಯರು, ಕೆ.ಜಿ.ಎಫ್. ವಿಧಾನಸಭಾ ಕ್ಷೇತ್ರ ರವರು ಮಾತನಾಡಿ, ಕೆ.ಜಿ.ಎಫ್ ಕ್ಷೇತ್ರದಲ್ಲಿ ಸುಳ್ಳು ಜಾತಿ ಪ್ರಮಾಣ ಪತ್ರ ಪ್ರಕರಣಗಳು ಹೆಚ್ಚಾಗಿರುತ್ತವೆ, ಈ ಬಗ್ಗೆ ಅಗತ್ಯ ಕ್ರಮ ಕೈಗೊಳ್ಳಲು ಒತ್ತಾಯಿಸಿದರು. ಇದೇ ರೀತಿ ಕಲಬುರಗಿ ವಿಭಾಗದ ಜಿಲ್ಲೆಗಳಲ್ಲಿಯೂ ಇಂತಹ ಪ್ರಕರಣಗಳು ಹೆಚ್ಚಾಗಿರುವುದಾಗಿ ದೇವದುರ್ಗ ವಿಧಾನಸಭಾ ಕ್ಷೇತ್ರದ ಶಾಸಕರಾದ ಶ್ರೀ ಶಿವನಗೌಡ ನಾಯಕ ರವರು ಸಹ ತಿಳಿಸಿದರು.

**(ಕ್ರಮ: ಡೈರೆಕ್ಟರ್ ಜನರಲ್ ಆಫ್ ಪೋಲೀಸ್, ನಾಗರಿಕ ಹಕ್ಕು ಜಾರಿ ನಿರ್ದೇಶನಾಲಯ)**

ಮಾನ್ಯ ವಿಧಾನಸಭಾ ಸದಸ್ಯರುಗಳಾದ ಶ್ರೀ ಎಂ.ಚಂದ್ರಪ್ಪ, ಶ್ರೀ ಐಹೊಳೆ ದುರ್ಯೋಧನ ಮಹಾಲಿಂಗಪ್ಪ ಮತ್ತು ಶ್ರೀ ಪಿ.ರಾಜೀವ್ ಇವರುಗಳು ಮಾತಾನಾಡಿ, ರಾಷ್ಟ್ರೀಕೃತ/ಲೀಡ್ ಬ್ಯಾಂಕ್‌ಗಳಲ್ಲಿ ಪ.ಜಾತಿ/ಪ.ಪಂಗಡದವರಿಗೆ ಸಾಲ ಸೌಲಭ್ಯ ನೀಡುವಲ್ಲಿ ಸರಿಯಾಗಿ ಸ್ಪಂದಿಸುತ್ತಿಲ್ಲ ಎಂದು ಸಭೆಯ ಗಮನಕ್ಕೆ ತಂದರು. ಕೊಳವೆಬಾವಿ ಕೊರೆಸಲು ಫಲಾನುಭವಿಗಳ ಪಟ್ಟಿ ನೀಡಲಾಗಿದ್ದು, ಇದುವರೆಗೂ ಟೆಂಡರ್ ಕರೆದಿರುವುದಿಲ್ಲ ಎಂದು ತಿಳಿಸಿದರು. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಸ.ಕ.ಇ ರವರು ಈಗಾಗಲೇ ಕೊಳವೆಬಾವಿ ಕೊರೆಯುವ ಬಗ್ಗೆ ಟೆಂಡರ್ ಕರೆಯಲಾಗಿದ್ದು, ಮಾನ್ಯ ಉಚ್ಚನ್ಯಾಯಾಲಯದಿಂದ ತಡೆಯಾಜ್ಞೆ ಇದ್ದ ಕಾರಣ ವಿಳಂಬವಾಗಿದೆ, ಆದರೆ ಪ್ರಸ್ತುತ ತಡೆಯಾಜ್ಞೆ ಪ್ರಕರಣಗಳು ಇತ್ಯರ್ಥವಾಗಿ ಟೆಂಡರ್ ಪ್ರಕ್ರಿಯೆಯನ್ನು ಪೂರ್ಣಗೊಳಸಲು ಕ್ರಮವಹಿಸಲಾಗಿದೆ ಎಂದು ತಿಳಿಸಿದರು.

(ಕ್ರಮ: ಅಪರ ಮುಖ್ಯ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ)

ಮಾನ್ಯ ಶ್ರೀ ಜೆ.ಸಿ.ಮಾಧುಸ್ವಾಮಿ, ಮಾನ್ಯ ಸಣ್ಣ ನೀರಾವರಿ, ಕಾನೂನು ಸಂಸದೀಯ ವ್ಯವಹಾರ ಮತ್ತು ಶಾಸನ ರಚನೆ ಸಚಿವರು ಮಾತನಾಡಿ, ಎಸ್ಕಾಂ, ಬೆಸ್ಕಾಂ ಕಂಪನಿಗಳಲ್ಲಿ ಸಣ್ಣ ನೀರಾವರಿ ಇಲಾಖೆಯಿಂದ ನೀಡಿರುವ ಬಿಲ್ಲುಗಳು ಪಾವತಿಯಾಗಿರುವುದಿಲ್ಲ. ಸಮಾಜ ಕಲ್ಯಾಣ ಇಲಾಖೆಯಿಂದ ವಸತಿ ಯೋಜನೆ, ಗಂಗಾಕಲ್ಯಾಣ, ಭೂ ಒಡೆತನ ಯೋಜನೆಗಳಿಗೆ ಪ್ರಾಮುಖ್ಯತೆ ನೀಡಬೇಕೆಂದು ಸಮಾಜ ಕಲ್ಯಾಣ ಸಚಿವರನ್ನು ಕೋರಿದರು. ಸಮಾಜ ಕಲ್ಯಾಣ ಇಲಾಖೆಯಿಂದ ನಡೆಸಲಾಗುತ್ತಿರುವ ವಸತಿ ಶಾಲೆಗಳಿಂದ ಉತ್ತಮ ಶಿಕ್ಷಣ ನೀಡಲಾಗುತ್ತಿದೆ ಎಂದು ಶ್ಲಾಘಿಸಿದರು.

(ಕ್ರಮ: ಅಪರ ಮುಖ್ಯ ಕಾರ್ಯದರ್ಶಿಗಳು, ಇಂಧನ ಇಲಾಖೆ)

ಚಿತ್ರದುರ್ಗ ಜಿಲ್ಲೆ ಹೊಳಲ್ಕೆರೆ ಕ್ಷೇತ್ರದ ಮಾನ್ಯ ಶಾಸಕರಾದ ಶ್ರೀ ಎಂ.ಚಂದ್ರಪ್ಪ ಇವರು ಮಾತನಾಡಿ, ವಿದ್ಯುತ್ ಸರಬರಾಜು ಕಂಪನಿಗಳಿಗೆ ನೀಡಿದ ಅನುದಾನ ಖರ್ಚು ಮಾಡಿರುವುದಿಲ್ಲ ಮತ್ತು ಸದರಿ ಅನುದಾನವನ್ನು ವರ್ಷಾಂತ್ಯದಲ್ಲಿ deemed expenditure ಎಂದು ತೋರಿಸಿ ಬೇರೆ ಕಾರ್ಯಕ್ರಮಕ್ಕೆ ಉಪಯೋಗಿಸಲಾಗುತ್ತಿದೆ ಎಂದು ಆಕ್ಷೇಪಿಸಿ ಏಕಗವಾಕ್ಷಿ ಪದ್ಧತಿಗೆ ಶಿಫಾರಸ್ಸು ಮಾಡಿದರು. ಮಾನ್ಯ ಮುಖ್ಯಮಂತ್ರಿಯವರು ಮಾತನಾಡಿ, ಕೊರೆದ ಕೊಳವೆ ಬಾವಿಗಳಿಗೆ ಅನುದಾನದ ಲಭ್ಯತೆಯನ್ನು ಲೆಕ್ಕಿಸದೇ ಎಲ್ಲಾ ಕೊಳವೆ ಬಾವಿಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಲು ನಿರ್ದೇಶಿಸಿದರು.

ಚಾಮರಾಜನಗರ ಜಿಲ್ಲೆ ಕೊಳ್ಳೇಗಾಲ ಕ್ಷೇತ್ರದ ಶಾಸಕರಾದ ಮಾನ್ಯ ಶ್ರೀ ಎನ್.ಮಹೇಶ್ ಇವರು ಮಾತನಾಡಿ, ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಕಾಯ್ದೆ ಕಲಂ 7ಡಿ ದಲ್ಲಿ deemed expenditureಗೆ ಅವಕಾಶವಿರುವುದರಿಂದ, ಡೀಮ್ಡ್ ವೆಚ್ಚ ಆಗುತ್ತದೆ. ಅದನ್ನು ಸರಿಪಡಿಸಲು 7ಡಿ ಯನ್ನು ರದ್ದುಪಡಿಸಲು ಸದರಿ ಕಾಯ್ದೆಗೆ ತಿದ್ದುಪಡಿ ತರಬೇಕೆಂದು ಕೋರಿದರು.

(ಕ್ರಮ: ಅಪರ ಮುಖ್ಯ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ ಮತ್ತು ಅಪರ ಮುಖ್ಯ ಕಾರ್ಯದರ್ಶಿಗಳು, ಇಂಧನ ಇಲಾಖೆ)

ಮಾನ್ಯ ಸದಸ್ಯರುಗಳು ಭೂ ಒಡೆತನ ಯೋಜನೆ ಅಡಿ ಪ.ಜಾತಿ/ಪ.ಪಂಗಡ ಜನರಿಗೆ ಜಮೀನು ಖರೀದಿಸಲು ಈಗಿರುವ ನಿಯಮಗಳ ದರಕ್ಕೆ ಯಾವುದೇ ಭೂ ಮಾಲೀಕರು ಜಮೀನು ಖರೀದಿಗೆ ನೀಡಲು ಒಪ್ಪದ ಕಾರಣ, ಜಮೀನನ್ನು ಖರೀದಿಸಲು ಸಾಧ್ಯವಾಗುತ್ತಿಲ್ಲ. ಆದ್ದರಿಂದ, ಭೂ ಒಡೆತನ ಯೋಜನೆ ಅಡಿಯಲ್ಲಿ ಜಮೀನು ಖರೀದಿಸಲು ಮಾರುಕಟ್ಟೆ ದರದನ್ವಯ ವಿಶೇಷ ದರ ನಿಗಧಿಪಡಿಸಲು ಕೋರಿದರು. ಈ ಕುರಿತು ಮಾನ್ಯ ಮುಖ್ಯಮಂತ್ರಿಗಳು ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಶ್ರೀ ದುರ್ಯೋಧನ ಮಹಾಲಿಂಗಪ್ಪ ಐಹೊಳೆ, ಮಾನ್ಯ ವಿಧಾನಸಭಾ ಸದಸ್ಯರು, ರಾಯಭಾಗ ಕ್ಷೇತ್ರ, ಮತ್ತು ಶ್ರೀ ಪಿ.ರಾಜೀವ್, ಮಾನ್ಯ ವಿಧಾನಸಭಾ ಸದಸ್ಯರು, ಕುಡಚಿ ಕ್ಷೇತ್ರ ರವರು ಮಾತಾನಾಡಿ, ಡಾ:ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ ತಾಂಡಾ, ಭೋವಿ ಮತ್ತು ಆದಿಜಾಂಬವ ಅಭಿವೃದ್ಧಿ ನಿಗಮಗಳು ಪ್ರತ್ಯೇಕಗೊಂಡಿದ್ದು, ಭೂ ಒಡೆತನ ಯೋಜನೆಯಡಿ ಹಾಗೂ ಗಂಗಾಕಲ್ಯಾಣ ಯೋಜನೆಯಡಿ ಕಡತಗಳನ್ನು ಮಾತ್ರ ವರ್ಗಾವಣೆ ಮಾಡಿದ್ದು, ಸಂಬಂಧಿಸಿದ ಅನುದಾನವನ್ನು ಡಾ:ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮದಲ್ಲಿಯೇ ಉಳಿಸಿಕೊಂಡಿರುತ್ತಾರೆ. ಇದರಿಂದ ನೂತನವಾಗಿ ಪ್ರಾರಂಭಿಸಲಾಗಿರುವ ನಿಗಮಗಳಲ್ಲಿ ಕಾರ್ಯಕ್ರಮ ಅನುಷ್ಠಾನಗೊಳಿಸುವುದು ಕಷ್ಟಕರವಾಗಿರುತ್ತದೆ, ಆದ್ದರಿಂದ ಸಂಬಂಧಿಸಿದ ಅನುದಾನವನ್ನು ಆಯಾ ನಿಗಮಗಳಿಗೆ ವರ್ಗಾವಣೆ ಮಾಡಲು ಸರ್ಕಾರದಿಂದ ಸೂಕ್ತ ಆದೇಶ ನೀಡಬೇಕೆಂದು ಕೋರಿದರು. ಇದಕ್ಕೆ ಪ್ರತಿಕ್ರಿಯಿಸಿದ ಮಾನ್ಯ ಮುಖ್ಯಮಂತ್ರಿಗಳು ಈ ಬಗ್ಗೆ ಪರಿಶೀಲಿಸಿ ಸೂಕ್ತ ಆದೇಶ ನೀಡಲು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಸಮಾಜ ಕಲ್ಯಾಣ ಇಲಾಖೆ ರವರಿಗೆ ಸೂಚಿಸಿದರು.

ಶ್ರೀ ಶಿವನಗೌಡ ನಾಯಕ, ಮಾನ್ಯ ವಿಧಾನಸಭಾ ಸದಸ್ಯರು, ದೇವದುರ್ಗ ಕ್ಷೇತ್ರ, ರಾಯಚೂರು ಜಿಲ್ಲೆ ರವರು ಮಾತನಾಡಿ, ಉದ್ಯಮಶೀಲತಾ ಯೋಜನೆಯಡಿ ಈ ಹಿಂದೆ ಸಹಾಯಧನ ರೂ.5.00 ಲಕ್ಷ ನೀಡಲಾಗುತ್ತಿದ್ದು, ಪ್ರಸ್ತುತ ರೂ.1.00 ಲಕ್ಷ ಹಾಗೂ ರೂ.50,000/- ಕ್ಕೆ ಇಳಿಸಲಾಗಿದೆ. ಆದರೆ ಇತರೆ ಇಲಾಖೆ/ ನಿಗಮಗಳಲ್ಲಿ ಯಾವುದೇ ಬದಲಾವಣೆ ಮಾಡಿರುವುದಿಲ್ಲ. ಆದ್ದರಿಂದ ಸಮಾಜ ಕಲ್ಯಾಣ ಇಲಾಖೆಯಲ್ಲಿ ಹಿಂದಿನ ಆದೇಶದಂತೆ ಸಹಾಯಧನ ರೂ.5.00 ಲಕ್ಷ ನೀಡಲು ಕೋರಿದರು.

**(ಕ್ರಮ: ಅಪರ ಮುಖ್ಯ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ)**

ಶ್ರೀಮತಿ ರೂಪ ಶಶಿಧರ್, ಮಾನ್ಯ ಕೆ.ಜಿ.ಎಫ್ ವಿಧಾನಸಭಾ ಕ್ಷೇತ್ರದ ಶಾಸಕರು ಮಾತನಾಡಿ, ಪ.ಜಾತಿ/ಪಂಗಡದ ಜನಾಂಗದವರು ಲ್ಯಾಂಡ್ ಗ್ರ್ಯಾಂಟ್‌ಗೆ ಸಲ್ಲಿಸಿರುವ 1650 ಅರ್ಜಿಗಳು ಮತ್ತು ರಿಜಿಸ್ಟರ್‌ಗಳು ಕಳುವಾಗಿರುವುದಾಗಿ ಅಲ್ಲಿನ ಅಧಿಕಾರಿಗಳು ತಿಳಿಸಿರುತ್ತಾರೆ. ಅಧಿಕಾರಿ ಬಗ್ಗೆ ದೂರು ದಾಖಲಾಗಿರುತ್ತದೆ. ಈ ಬಗ್ಗೆ ವಿಶೇಷ ತನಿಖೆ ಆಗಬೇಕು ಮತ್ತು ಈ ಸಂಬಂಧ ಪರಿಹಾರ ದೊರಕಿಸಿ ಕೊಡಬೇಕೆಂದು ಸಭೆಗೆ ಕೋರಿದರು.

**(ಕ್ರಮ: ಅಪರ ಮುಖ್ಯ ಕಾರ್ಯದರ್ಶಿಗಳು, ಕಂದಾಯ ಇಲಾಖೆ)**

ಶ್ರೀ ಎನ್.ಮಹೇಶ್, ಮಾನ್ಯ ಶಾಸಕರು, ಕೊಳ್ಳೇಗಾಲ ಕ್ಷೇತ್ರ ಇವರು ಮಾತನಾಡಿ, ಕರ್ನಾಟಕ ವಿಶ್ವವಿದ್ಯಾಲಯದಲ್ಲಿ ಅಸಿಸ್ಟಂಟ್ ಪ್ರೋಫೆಸರ್‌ಗಳ ನೇಮಕದಲ್ಲಿ ನಿಯಮ ಉಲ್ಲಂಘನೆ ಮಾಡಿರುವುದನ್ನು ಸಭೆಯ ಗಮನಕ್ಕೆ ತಂದು ಇದನ್ನು ಸರಿ ಪಡಿಸಲು ಕೋರಿದರು. ಮಾನ್ಯ ಮುಖ್ಯಮಂತ್ರಿಗಳು ಮಾತನಾಡಿ, ಅಪರ ಮುಖ್ಯ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ ಮತ್ತು ಸಮಾಜ ಕಲ್ಯಾಣ ಇಲಾಖೆ ರವರು ಅಗತ್ಯ ಕ್ರಮ ಕೈಗೊಳ್ಳಲು ಸೂಚಿಸಿದರು.

**(ಕ್ರಮ: ಅಪರ ಮುಖ್ಯ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ ಮತ್ತು**
**ಅಪರ ಮುಖ್ಯ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ)**

ಶ್ರೀ ಎನ್.ಮಹೇಶ್, ಮಾನ್ಯ ಶಾಸಕರು, ಕೊಳ್ಳೇಗಾಲ ಕ್ಷೇತ್ರ ಇವರು ಮಾತನಾಡಿ, ಪಿ.ಟಿ.ಸಿ.ಎಲ್ ಕಾಯ್ದೆಯಲ್ಲಿ ಕೆಲವು ನ್ಯೂನತೆಗಳ ಬಗ್ಗೆ ಮಾನ್ಯ ನ್ಯಾಯಾಲಯಗಳಲ್ಲಿ ಆದೇಶಗಳು ಆಗಿರುತ್ತವೆ. ಅವುಗಳನ್ನು ಗಮನಿಸಿ ಪಿ.ಟಿ.ಸಿ.ಎಲ್. ಕಾಯ್ದೆಗೆ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರ ಹಿತದೃಷ್ಟಿಯಿಂದ ಸದರಿ ಕಾಯ್ದೆಗೆ ಕಂದಾಯ ಇಲಾಖೆಯಿಂದ ಸೂಕ್ತ ತಿದ್ದುಪಡಿಗೆ ತಕ್ಷಣವೇ ಕ್ರಮ ವಹಿಸಲು ಕೋರಿದರು.

**(ಕ್ರಮ: ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ ಮತ್ತು**
**ಸರ್ಕಾರ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ)**

ಶ್ರೀಮತಿ ಯಶೋಧಮ್ಮ, ರಾಜ್ಯ ಸಂಚಾಲಕರು, ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳ ಮೇಲ್ವಿಚಾರಣೆ ಮತ್ತು ಬಲವರ್ಧನಾ ಸಮಿತಿರವು ಸಭೆಯಲ್ಲಿ ಹಾಜರಿದ್ದು, ಈ ಕೆಳಕಂಡ ವಿಷಯಗಳ ಬಗ್ಗೆ ಪ್ರಸ್ತಾಪಿಸಿದರು.

- ದೌರ್ಜನ್ಯ ಪ್ರಕರಣಗಳು ಹೆಚ್ಚಿನ ಸಂಖ್ಯೆಯಲ್ಲಿ ಇತ್ಯರ್ಥವಾಗಲು ಬಾಕಿ ಇದ್ದು, ಹೆಚ್ಚುವರಿಯಾಗಿ ಒಬ್ಬ ಅಡಿಷನಲ್ ಅಡ್ವೋಕೇಟ್ ಜನರಲ್ ರವರನ್ನು ನೇಮಕ ಮಾಡಲು.
- ದೌರ್ಜನ್ಯ ಕಾಯ್ದೆ ಅನುಷ್ಟಾನ ಮಾಡಲು ಸ್ಪೆಷಲ್ ಆಫೀಸರ್ ನೇಮಕ ಮಾಡಲು.
- ದೌರ್ಜನ್ಯ ಕಾಯ್ದೆ ನಿಯಮ -8ರ ಪ್ರಕಾರ ರಕ್ಷಣಾ ಘಟಕ ಸ್ಥಾಪಿಸಲು ಕ್ರಮ ಕೈಗೊಳ್ಳಲು.
- ದೌರ್ಜನ್ಯ ಕಾಯ್ದೆ ನಿಯಮ -15 ರಲ್ಲಿ ಕೊಲೆ ಪ್ರಕರಣಗಳಲ್ಲಿ ಕುಟುಂಬದ ಅವಲಂಬಿತರಿಗೆ ಸರ್ಕಾರಿ ನೌಕರಿ ನೀಡಲು ಅವಕಾಶವಿದ್ದು, ಅದರಂತೆ ಕ್ರಮ ಜರುಗಿಸಲು.
- ವಿಶೇಷ ನ್ಯಾಯಾಲಯಗಳನ್ನು ಸ್ಥಾಪಿಸಲು.

ಮೇಲ್ಕಂಡ ವಿಷಯಗಳ ಪರಿಶೀಲಿಸಿ ಸೂಕ್ತ ಕ್ರಮ ತೆಗೆದುಕೊಳ್ಳಲು ಸರ್ಕಾರದ ಅಪರ ಮುಖ್ಯಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ ಇವರಿಗೆ ಮಾನ್ಯ ಮುಖ್ಯಮಂತ್ರಿಯವರು ಸೂಚಿಸಿದರು.

**(ಕ್ರಮ: ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ)**

**೯. ಮಾನ್ಯ ಮುಖ್ಯಮಂತ್ರಿಗಳು ಅಂತಿಮವಾಗಿ, ನಿಯಮಗಳನ್ವಯ ದೌರ್ಜನ್ಯ ಪ್ರಕರಣಗಳಲ್ಲಿ ಪರಿಣಾಮಕಾರಿಯಾಗಿ ಮತ್ತು ನಿರ್ದಿಷ್ಟ ಸಮಯದೊಳಗೆ ಯಾವುದೇ ವಿಳಂಬವಾಗದೇ ಪೋಲೀಸ್ ಇಲಾಖೆ, ಕಾನೂನು ಮತ್ತು ಅಭಿಯೋಜನೆ ಇಲಾಖೆ ಮತ್ತು ಸಮಾಜ ಕಲ್ಯಾಣ ಇಲಾಖೆ, ಇವರುಗಳು ಕ್ರಮವಹಿಸಲು ಈ ಕೆಳಕಂಡ ನಿರ್ದೇಶನಗಳನ್ನು ನೀಡಿದರು.**

ಈ ಸಭೆಯನ್ನು ನಮ್ಮ ಸರ್ಕಾರವು ಬಹಳ ಗಂಭೀರವಾಗಿ ತೆಗೆದುಕೊಂಡಿದೆ ಎಂಬುದನ್ನು ಇಲ್ಲಿರುವ ಎಲ್ಲಾ ಅಧಿಕಾರಿಗಳು ಅರ್ಥ ಮಾಡಿಕೊಳ್ಳಬೇಕು. ದೌರ್ಜನ್ಯ ಪ್ರಕರಣಗಳಡಿ ಕೇಸ್‌ಗಳನ್ನು ದಾಖಲಿಸುವಲ್ಲಿ, ಅವರಿಗೆ ಸಮಯಕ್ಕೆ ಸರಿಯಾಗಿ ದೋಷಾರೋಪಣಾ ಪಟ್ಟಿ ತಯಾರಿಸುವಲ್ಲಿ ಮತ್ತು ಪ್ರಾಸಿಕ್ಯೂಷನಲ್ಲಿ ಆಗುವಂತಹ ನಿಧಾನ ಪ್ರವೃತ್ತಿಯನ್ನು ನಾವು ಗಮನಿಸಿದ್ದೇವೆ. ಈ ತರಹ ಮುಂದೆ ಆಗಬಾರದು. ಈಗ ಸಂಚಿತವಾಗಿ ಎಷ್ಟು ಪ್ರಕರಣಗಳು ಬಾಕಿ ಇವೆ ಎಂಬುದನ್ನು ತಿಳಿಸಲು ಒಳಾಡಳಿತ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಲಾಗಿದೆ. ಅಧಿಕಾರಿಗಳು ಸಭೆಗೆ ಬರುವಾಗ ವಿಷಯದ ಗಾಂಭೀರ್ಯತೆ ಅರ್ಥ ಮಾಡಿಕೊಳ್ಳಬೇಕು. ಜಿಲ್ಲಾ ಮತ್ತು ಉಪ ವಿಭಾಗ ಮಟ್ಟದಲ್ಲೂ ಸಹ ಅತ್ಯಂತ ಕಾಳಜಿಯಿಂದ ಕೆಲಸ ನಿರ್ವಹಿಸಬೇಕು. ಹಾಗೂ ಸದರಿ ಈ ಎಲ್ಲಾ ಪ್ರಕ್ರಿಯೆಗಳ ಕುರಿತು ವರದಿ ವ್ಯವಸ್ಥೆಯನ್ನು ಮಾಡಬೇಕು. ಅಪರ ಮುಖ್ಯ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ ರವರು ಇತರೆ ಇಲಾಖೆಗಳೊಂದಿಗೆ ತಿಂಗಳಿಗೊಮ್ಮೆ ಈ ಬಗ್ಗೆ ಪ್ರಗತಿ ಪರಿಶೀಲನೆ ಮಾಡತಕ್ಕದ್ದು. ಯಾವುದೇ ಮುಖ್ಯ ವಿಷಯವಿದ್ದಲ್ಲಿ ಸಭೆಗಾಗಿ ಕಾಯದೆ ನೇರವಾಗಿ ಕಡತ ಸಲ್ಲಿಸಿದ್ದಲ್ಲಿ, ತಕ್ಷಣ ಕ್ರಮವಹಿಸಲಾಗುವುದು. ಗಂಭೀರವಾದ ಪ್ರಕರಣಗಳಲ್ಲಿ ಯಾವ ಅಧಿಕಾರಿಗಳು ಲೋಪ ಮಾಡಿರುತ್ತಾರೆ ಅವರ ಮೇಲೆ ಶಿಸ್ತಿನ ಕ್ರಮ ತೆಗೆದುಕೊಳ್ಳಬೇಕು.

ಯಾದಗಿರಿ, ಬಾಗಲಕೋಟೆ ಮತ್ತು ಶಿವಮೊಗ್ಗ ಜಿಲ್ಲೆಗಳಲ್ಲಿನ ೩ ವಿಶೇಷ ನ್ಯಾಯಾಲಯಗಳನ್ನು ಸ್ಥಾಪಿಸುವ ಕುರಿತು ತಕ್ಷಣವೇ ಅನುಮೋದನೆಗೆ ಕಳುಹಿಸತಕ್ಕದ್ದು. ಕಾನೂನು ಸಚಿವರ ಸಮನ್ವಯದೊಂದಿಗೆ ಮಾನ್ಯ ಉಚ್ಛ ನ್ಯಾಯಾಲಯದೊಂದಿಗೆ ಸಂಪರ್ಕದಲ್ಲಿದ್ದು ಈ ವಿಷಯವಾಗಿ ಮುಂದಿನ ಅಗತ್ಯ ಕ್ರಮವನ್ನು ವಹಿಸಲು ತಯಾರಿರುತ್ತೇವೆ.

**(ಕ್ರಮ: ಅಪರ ಮುಖ್ಯ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ)**

ಸಾಕ್ಷಿಗಳ ರಕ್ಷಣೆ ಕೂಡ ಮುಖ್ಯವಾದ ಅಂಶವಾಗಿದ್ದು, ನ್ಯಾಯಾಲಯಗಳಿಗೆ ಸಾಕ್ಷಿದಾರರು ಹೋಗಿ ಬರುವುದಷ್ಟೇ ಅಲ್ಲದೆ, ಎಲ್ಲಾ ರೀತಿಯಿಂದಲೂ ಅವರಿಗೆ ರಕ್ಷಣೆ ನೀಡಲು ಕ್ರಮವಹಿಸಬೇಕು.

**(ಕ್ರಮ: ಡೈರೆಕ್ಟರ್ ಜನರಲ್ ಅಂಡ್ ಇನ್ಸ್‌ಪೆಕ್ಟರ್ ಜನರಲ್ ಆಫ್ ಪೋಲೀಸ್)**

ಅರಣ್ಯ ಹಕ್ಕು ಕಾಯ್ದೆಯಡಿ ಹಕ್ಕು ಪತ್ರ ತಿರಸ್ಕೃತಗೊಂಡ ಪ್ರಕರಣಗಳ ಪರಿಶೀಲನೆ ಮಾಡಬೇಕು ಹಾಗೂ ಮಾನ್ಯ ಸರ್ವೋಚ್ಛ ನ್ಯಾಯಾಲಯದ ಆದೇಶದ ಪ್ರಕಾರ ರಾಜ್ಯ ಮಟ್ಟದ ಪರಿಶೀಲನಾ ಸಮಿತಿಯನ್ನು ತಕ್ಷಣವೇ ರಚಿಸಬೇಕು. ತಿರಸ್ಕೃತಗೊಂಡ ಸುಮಾರು ೧,೮೦,೦೦೦ ಅರ್ಜಿಗಳನ್ನು ಸಂಪೂರ್ಣವಾಗಿ ಮರುಪರಿಶೀಲನೆ ಮಾಡಬೇಕು. ಅದಲ್ಲದೇ ಸಂಬಂಧಿಸಿದ ಸಮುದಾಯದ ೩

ಸದಸ್ಯರನ್ನು ನಾಮ ನಿರ್ದೇಶನ ಮಾಡಬೇಕು ಮತ್ತು ಕೆಳಹಂತದಲ್ಲಿಯೂ ಸಹ ನಾಮ ನಿರ್ದೇಶನ ಮಾಡಬೇಕು.

**(ಕ್ರಮ: ಅಪರ ಮುಖ್ಯ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ ಮತ್ತು ಅಪರ ಮುಖ್ಯ ಕಾರ್ಯದರ್ಶಿಗಳು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ)**

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಜಾತಿ ಪ್ರಮಾಣ ಪತ್ರಗಳ ನೀಡುವಿಕೆಯಲ್ಲಿ ನಡೆಯುತ್ತಿರುವ ದುರುಪಯೋಗ ತಕ್ಷಣವೇ ಸಂಪೂರ್ಣವಾಗಿ ನಿಲ್ಲಬೇಕು. ಇದರ ಬಗ್ಗೆ ಒಂದು ಅಭಿಯಾನವನ್ನು ನಡೆಸಿ ಎಲ್ಲಾ ಜಿಲ್ಲಾಧಿಕಾರಿಗಳಿಗೆ ಹಾಗೂ ವಿವಿಧ ಹಂತದ ಅಧಿಕಾರಿಗಳಿಗೆ ಸ್ಪಷ್ಟವಾದ ನಿರ್ದೇಶನ ನೀಡತಕ್ಕದ್ದು. ಅಲ್ಲದೇ ಯಾವುದೇ ಸುಳ್ಳು ಜಾತಿ ಪ್ರಮಾಣ ಪತ್ರ ಪ್ರಕರಣ ಕಂಡುಬಂದರೂ ಸಹ ಅವರ ಮೇಲೆ ಕಠಿಣ ಕ್ರಮ ಜರುಗಿಸಲಾಗುವುದೆಂದು ಎಚ್ಚರಿಕೆ ನೀಡಲು ತಿಳಿಸುವುದು. ಸಂವಿಧಾನದಿಂದ ನೀಡಲಾದ ಈ ವಿಶೇಷ ಹಕ್ಕು ದುರುಪಯೋಗವಾಗಬಾರದು.

**(ಕ್ರಮ: ಡೈರೆಕ್ಟರ್ ಜನರಲ್ ಆಫ್ ಪೋಲೀಸ್, ನಾಗರಿಕ ಹಕ್ಕು ಜಾರಿ ನಿರ್ದೇಶನಾಲಯ ಮತ್ತು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಕಂದಾಯ ಇಲಾಖೆ)**

ದೌರ್ಜನ್ಯ ಪ್ರಕರಣಗಳ ಶೀಘ್ರ ವಿಲೇವಾರಿಗೆ ಹೆಚ್ಚುವರಿ ಅಡಿಷನಲ್ ಅಡ್ವೋಕೇಟ್ ಜನರಲ್ ರವರನ್ನು ನೇಮಿಸುವ ಬಗ್ಗೆ ಸಭೆಯಲ್ಲಿ ಸಲಹೆ ಬಂದಿದ್ದು, ಅದನ್ನು ಅಡ್ವೋಕೇಟ್ ಜನರಲ್ ರವರೊಂದಿಗೆ ಚರ್ಚಿಸಿ ಅಗತ್ಯ ಕ್ರಮವಹಿಸಲಾಗುವುದು ಹಾಗೂ ಈ ಬಗ್ಗೆ ವಿಶೇಷ ಅಧಿಕಾರಿ ನೇಮಿಸಲು ಸಲಹೆ ಮಾಡಿದ್ದು ಅದರಂತೆ ಕ್ರಮವಹಿಸುವುದು.

**(ಕ್ರಮ: ಪ್ರಧಾನ ಕಾರ್ಯದರ್ಶಿಗಳು, ಕಾನೂನು ಇಲಾಖೆ)**

SCSP/TSP ಕಾಯ್ದೆಯಲ್ಲಿ ಇರುವ 7"D" ಕುರಿತು Deemed Expenditure ವಿಷಯಕ್ಕೆ ಸಂಬಂಧಿಸಿದಂತೆ ಕಡತವನ್ನು ಮಂಡಿಸಿ ಕಾನೂನು ಇಲಾಖೆ ಪರಿಶೀಲನೆಯೊಂದಿಗೆ ಕಳುಹಿಸಿದ್ದಲ್ಲಿ ಅದನ್ನು ಸಂಪುಟ ಸಭೆಯಲ್ಲಿ ನಂತರ ಅಧಿವೇಶನದಲ್ಲಿ ಮಂಡಿಸಿ ಸೂಕ್ತ ಬದಲಾವಣೆಗೆ ಅಗತ್ಯ ಕ್ರಮ ಕೈಗೊಳ್ಳಲಾಗುವುದು.

**(ಕ್ರಮ: ಅಪರ ಮುಖ್ಯ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ ಮತ್ತು ಪ್ರಧಾನ ಕಾರ್ಯದರ್ಶಿಗಳು, ಕಾನೂನು ಇಲಾಖೆ)**

ದೌರ್ಜನ್ಯ ಪ್ರತಿಬಂಧ ಕಾಯ್ದೆಯಡಿ ಇರುವ ನಿಯಮಗಳನ್ನು ಗಮನಿಸಿ ಅದನ್ನು ಅನುಷ್ಠಾನ ಮಾಡಬೇಕಾಗಿರುವುದು ಮುಖ್ಯವಾಗಿರುತ್ತದೆ. ಇದಕ್ಕಾಗಿ ಅಧಿಕಾರಿಗಳ ಮನಸ್ಥಿತಿ ಬದಲಾವಣೆಯಾದರೆ ಮಾತ್ರ ನಾವು ಕೆಲಸ ಮಾಡಲು ಸಾಧ್ಯವಾಗುತ್ತದೆ. ಈ ವರದಿಗಳು ಸಭೆಗೆ ಮಾತ್ರ ಸೀಮಿತವಾಗದೆ ವಿಷಯವನ್ನು ಗಂಭೀರವಾಗಿ ಪರಿಗಣಿಸಬೇಕು. ಈ ವಿಷಯಗಳಲ್ಲಿ ಯಾರೇ ತಪ್ಪು ಮಾಡಿದರೂ ನಮ್ಮ ಸರ್ಕಾರ ಕ್ಷಮಿಸುವುದಿಲ್ಲ. ಈ ಸಂದೇಶ ಸಮುದಾಯದ ಕಟ್ಟಕಡೆಯ ವ್ಯಕ್ತಿಗೆ ತಲುಪಬೇಕು. ಈ ಸರ್ಕಾರ ಅವರ ಜೊತೆಗಿದ್ದು, ಅವರ ಜೀವನದ ಗುಣಮಟ್ಟ ಹೆಚ್ಚಾಗಬೇಕು ಹಾಗೂ ಬದುಕಿಗೆ ಸುರಕ್ಷತೆ ಕೊಡಬೇಕು

ಹಾಗೂ ಅವರನ್ನು ಸಮಾಜದ ಮುಖ್ಯವಾಹಿನಿಗೆ ತರಬೇಕೆಂದೇ ಈ ವರ್ಗದವರಿಗಾಗಿ ಇಷ್ಟೆಲ್ಲಾ ಯೋಜನೆಗಳನ್ನು ಜಾರಿಗೊಳಿಸಿ ಅನುದಾನವನ್ನು ಒದಗಿಸಲಾಗಿರುತ್ತದೆ. ಶಿಕ್ಷಣ, ಉದ್ಯೋಗ ಮತ್ತು ಸಬಲೀಕರಣ (Education, Employment and Empowerment) ಕುರಿತಂತೆ ನಮ್ಮ ಸರ್ಕಾರ ಪ್ರಾಶಸ್ತ್ಯ ನೀಡಲಾಗುವುದು. ಇದೇ ರೀತಿ ಅಧಿಕಾರಿಗಳೂ ಸಹ ಕ್ರಮ ವಹಿಸಬೇಕು.

(ಕ್ರಮ: ಡೈರೆಕ್ಟರ್ ಜನರಲ್ ಅಂಡ್ ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್ ಮತ್ತು
ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ)

ಮುಂದಿನ ಸಭೆಯೊಳಗೆ ತನಿಖೆಯಲ್ಲಿ ಹಾಗೂ ಶಿಕ್ಷೆ ಪ್ರಮಾಣ ಹೆಚ್ಚಿಸುವಲ್ಲಿ ಸುಧಾರಣೆಯಾಗಬೇಕು. ನಿಯಮಗಳನ್ವಯ ಕೆಲಸಗಳನ್ನು ಪಾಲನೆ ಮಾಡಿ ಸಮಾಜದಲ್ಲಿ ಸಾಮರಸ್ಯ ಮೂಡಲು ಎಲ್ಲಾ ರೀತಿಯ ಕ್ರಮವನ್ನು ಜರುಗಿಸಲಾಗುವುದು.

(ಕ್ರಮ: ಡೈರೆಕ್ಟರ್ ಜನರಲ್ ಅಂಡ್ ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್ ಮತ್ತು
ನಿರ್ದೇಶಕರು, ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆ)

ಈ ಸಭೆಯ ಎಲ್ಲಾ ವಿಚಾರಗಳ ಬಗ್ಗೆ ತೆಗೆದುಕೊಂಡ ಕ್ರಮಗಳನ್ನು ಒಂದು ತಿಂಗಳೊಳಗಾಗಿ ಸರ್ಕಾರಕ್ಕೆ ವರದಿ ಸಲ್ಲಿಸಬೇಕು. ಈ ಕುರಿತು ಪ್ರತಿ ತಿಂಗಳು ತೆಗೆದುಕೊಂಡ ಕ್ರಮಗಳ ಬಗ್ಗೆ ಸಭೆ ನಡೆಸಿ ಪರಿಶೀಲನೆ ಮಾಡಬೇಕು. ರಾಜ್ಯ ಮಟ್ಟದ ಸಭೆ 6 ತಿಂಗಳಿಗೊಮ್ಮೆ ನಡೆಸಬೇಕಿದ್ದು, ಅಗತ್ಯವಿದ್ದಲ್ಲಿ 3 ತಿಂಗಳಿಗೊಮ್ಮೆ ಸಭೆ ನಡೆಸಲು ಅಲ್ಲದೇ ಯಾವುದೇ ಮುಖ್ಯವಾದ ವಿಷಯವಿದ್ದಲ್ಲಿ ತಕ್ಷಣವೇ ನಾವು ಸಭೆ ನಡೆಸಲು ಸಿದ್ಧರಿದ್ದೇವೆ. ಅದಕ್ಕಾಗಿ ನಾವೆಲ್ಲರೂ ಒಟ್ಟಾಗಿ ಸೇರಿ ಕೆಲಸ ನಿರ್ವಹಿಸೋಣ ಎಂದು ತಿಳಿಸಿದರು.

(ಕ್ರಮ: ಅಪರ ಮುಖ್ಯ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ)

ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ ರವರು ವಂದನೆಗಳನ್ನು ಸಲ್ಲಿಸುವುದರ ಮೂಲಕ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

(ಬಸವರಾಜ ಬೊಮ್ಮಾಯಿ),
ಮುಖ್ಯಮಂತ್ರಿಗಳು ಮತ್ತು ಅಧ್ಯಕ್ಷರು,
ರಾಜ್ಯ ಮಟ್ಟದ ಜಾಗೃತ ಮತ್ತು ಉಸ್ತುವಾರಿ ಸಮಿತಿ ಸಭೆ
ಕರ್ನಾಟಕ ಸರ್ಕಾರ.